ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 104 | ರಾಯಚೂರು Raichur 06-10-2026 | ಮಂಗಳವಾರ Tuesday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685




# ಫಾರ್ಮ್-6 ಬದಲಾವಣೆಗೆ ಅನುಮೋದನೆ ನೀಡಿಲ್ಲ: ಸುಪ್ರೀಂ ಕೋರ್ಟ್ ಸ್ಪಷ್ಟನೆ

ನವದೆಹಲಿ: ಹೊಸ ಮತದಾರರ ನೋಂದಣಿಗೆ ಬಳಸುವ ಫಾರ್ಮ್-6ರಲ್ಲಿ ಯಾವುದೇ ಬದಲಾವಣೆಗೆ ಸುಪ್ರೀಂ ಕೋರ್ಟ್ ಅನುಮೋದನೆ ನೀಡಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ. ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಸಂದರ್ಭದಲ್ಲಿ ಫಾರ್ಮ್-6ರ ಆನ್‌ಲೈನ್ ಸ್ವರೂಪದಲ್ಲಿ ಹೆಚ್ಚುವರಿ ಅಂಶಗಳನ್ನು ಸೇರಿಸಲಾಗಿದೆ ಎಂಬ ಆಕ್ಷೇಪದ ವಿಚಾರಣೆ ವೇಳೆ ಈ ವಿಷಯ ಪ್ರಸ್ತಾಪವಾಗಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್, ನ್ಯಾಯಮೂರ್ತಿ ಜೋಯ್ಮಲ್ಯ ಬಾಗ್ಚಿ ಹಾಗೂ ನ್ಯಾಯಮೂರ್ತಿ ವಿ. ಮೋಹನ ಅವರನ್ನೊಳಗೊಂಡ ಪೀಠದ ಮುಂದೆ ಪ್ರಕರಣ ವಿಚಾರಣೆಗೆ ಬಂದಿತು. ಎಸ್ ಐಆರ್ ಸಂದರ್ಭದಲ್ಲಿ ಫಾರ್ಮ್-6ರ ಆನ್ ಲೈನ್ ಆವೃತ್ತಿಯಲ್ಲಿ ಕೆಲವು ಬದಲಾವಣೆ ಮಾಡಲಾಗಿದೆ ಎಂದು ನ್ಯಾಯಾಲಯದ ಗಮನಕ್ಕೆ ತರಲಾಯಿತು.

ಇದಕ್ಕೆ ಪ್ರತಿಕ್ರಿಯಿಸಿದ ಪೀಠ, ಬದಲಾದ ಫಾರ್ಮ್-6ಕ್ಕೆ ನ್ಯಾಯಾಲಯ ಯಾವುದೇ ಅನುಮೋದನೆ ನೀಡಿಲ್ಲ ಎಂದು ಸ್ಪಷ್ಟಪಡಿಸಿತು. ಸಂಬಂಧಪಟ್ಟ ದಾಖಲೆಗಳನ್ನು ನ್ಯಾಯಾಲಯದ ಮುಂದೆ ಸಲ್ಲಿಸಿದ ನಂತರ ಬದಲಾವಣೆಗಳನ್ನು ಯಾರು ಮತ್ತು ಯಾವ ಆಧಾರದಲ್ಲಿ ಮಾಡಿದ್ದಾರೆ ಎಂಬುದನ್ನು ಪರಿಶೀಲಿಸಲಾಗುವುದು ಎಂದು ಮುಖ್ಯ ನ್ಯಾಯಮೂರ್ತಿ ತಿಳಿಸಿದರು.

ವಕೀಲ ಶೈಲೇಂದ್ರ ಮಣಿ ತ್ರಿಪಾಠಿ ಸಲ್ಲಿಸಿರುವ ಅರ್ಜಿಯಲ್ಲಿ ಫಾರ್ಮ್-6ರ ಆನ್‌ಲೈನ್ ಆವೃತ್ತಿಯಲ್ಲಿ ಹೆಚ್ಚುವರಿ ಮಾಹಿತಿ ಕೇಳುತ್ತಿರುವುದನ್ನು ಪ್ರಶ್ನಿಸಲಾಗಿದೆ. ಅರ್ಜಿದಾರರ ಪೋಷಕರು ಅಥವಾ ಅಜ್ಜ-ಅಜ್ಜಿಯರ ವಿವರ ಹಾಗೂ ಹಿಂದಿನ ಎಸ್





ಐಆರ್ ಮತದಾರರ ಪಟ್ಟಿಗೆ ಸಂಬಂಧಿಸಿದ ಘೋಷಣೆಯನ್ನು ಹೊಸದಾಗಿ ಸೇರಿಸಲಾಗಿದೆ ಎಂಬುದು ಅರ್ಜಿದಾರರ ಆಕ್ಷೇಪವಾಗಿದೆ.

ಅರ್ಜಿದಾರರ ಪರ ವಾದ ಮಂಡಿಸಿದ ಹಿರಿಯ ವಕೀಲೆ ಮೇನಕಾ ಗುರುಸ್ವಾಮಿ, ದೆಹಲಿಯಲ್ಲಿ ನಡೆದ ಎಸ್‌ಐಆರ್ ಪ್ರಕ್ರಿಯೆ ವೇಳೆ ಹೊಸ ಮತದಾರರ ನೋಂದಣಿಗೆ ಹೆಚ್ಚುವರಿ ಷರತ್ತುಗಳನ್ನು ಅಳವಡಿಸಲಾಗಿದೆ ಎಂದು ನ್ಯಾಯಾಲಯಕ್ಕೆ ತಿಳಿಸಿದರು. ಚುನಾವಣಾ ಆಯೋಗದ ಪೋರ್ಟಲ್‌ನಲ್ಲಿರುವ ಫಾರ್ಮ್‌ನಲ್ಲಿ ಮಾಡಲಾಗಿದೆ ಎನ್ನಲಾದ ಬದಲಾವಣೆಗಳನ್ನು ಪ್ರಶ್ನಿಸಿರುವ ಅರ್ಜಿಗೆ ನ್ಯಾಯಾಲಯ ನೋಟಿಸ್ ನೀಡಿದೆ.

### ಫಾರ್ಮ್-6 ವಿವಾದದ ಹಿನ್ನೆಲೆ ಏನು?

ಮತದಾರರ ಪಟ್ಟಿಯಲ್ಲಿ ಹೊಸದಾಗಿ ಹೆಸರು ನೋಂದಾಯಿಸಿಕೊಳ್ಳಲು ಫಾರ್ಮ್-6 ಬಳಸಲಾಗುತ್ತದೆ. ಪ್ರಸ್ತುತ ವಿವಾದವು ಅದರ ಆನ್‌ಲೈನ್ ಆವೃತ್ತಿಯಲ್ಲಿ ಸೇರಿಸಲಾಗಿದೆ ಎನ್ನಲಾದ ಹೆಚ್ಚುವರಿ ಘೋಷಣೆಗೆ ಸಂಬಂಧಿಸಿದೆ.

ಜುಲೈನಲ್ಲಿ ಆನ್‌ಲೈನ್ ಫಾರ್ಮ್‌ಗೆ ಹೊಸ ವಿಭಾಗವೊಂದನ್ನು ಸೇರಿಸಲಾಗಿದ್ದು, ಅರ್ಜಿದಾರರ ಹೆಸರು ಅಥವಾ ಅವರ ಪೋಷಕರು, ಅಜ್ಜ-ಅಜ್ಜಿಯರ ಹೆಸರು ಹಿಂದಿನ ಎಸ್‌ಐಆರ್ ಸಂದರ್ಭದಲ್ಲಿ ಸಿದ್ಧಪಡಿಸಲಾದ ಮತದಾರರ ಪಟ್ಟಿಯಲ್ಲಿ ಇತ್ತೇ ಎಂಬ ಮಾಹಿತಿಯನ್ನು ನೀಡುವಂತೆ ಕೇಳಲಾಗಿದೆ ಎನ್ನಲಾಗಿದೆ. ಆನ್‌ಲೈನ್ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಪೂರ್ಣಗೊಳಿಸಲು ಈ ಘೋಷಣೆಗೆ ಉತ್ತರಿಸುವುದು ಅಗತ್ಯವಾಗಿತ್ತು ಎಂಬುದು ಅರ್ಜಿದಾರರ ವಾದ.

ಈ ವಿಚಾರ ಚುನಾವಣಾ ಆಯೋಗದೊಳಗೂ ಭಿನ್ನಾಭಿಪ್ರಾಯಕ್ಕೆ ಕಾರಣವಾಗಿದೆ ಎಂದು ವರದಿಯಾಗಿದೆ. ಚುನಾವಣಾ ಆಯುಕ್ತರಾದ ವಿವೇಕ್ ಜೋಶಿ ಮತ್ತು ಸುಖ್‌ಬೀರ್ ಸಿಂಗ್ ಸಂಧು ಈ ಕ್ರಮದ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದ್ದರು ಎನ್ನಲಾಗಿದೆ. 1960ರ ಮತದಾರರ ನೋಂದಣಿ ನಿಯಮಗಳಡಿ ಫಾರ್ಮ್-6 ನಿಗದಿಪಡಿಸಿರುವುದರಿಂದ, ನಿಯಮಬದ್ಧ ತಿದ್ದುಪಡಿ ಪ್ರಕ್ರಿಯೆ ಅನುಸರಿಸದೆ ಕೇವಲ ಆನ್‌ಲೈನ್ ಸ್ವರೂಪದಲ್ಲಿ ಬದಲಾವಣೆ ಮಾಡುವುದು ಸರಿಯಲ್ಲ ಎಂಬ ಅಭಿಪ್ರಾಯ ವ್ಯಕ್ತವಾಗಿದೆ.

2ನೇ ಪುಟಕ್ಕೆ

# ಸಣ್ಣ, ಅತಿ ಹಿಂದುಳಿದ ಸಮುದಾಯಗಳಿಗೆ ನ್ಯಾಯ ಒದಗಿಸಲು

## ಓಬಿಸಿ ಒಳ ಮೀಸಲಾತಿ ಜಾರಿಯಾಗಲಿ: ರಘು ಕೌಟಿಲ್ಯ

ರಾಯಚೂರು: ಹಿಂದುಳಿದ ವರ್ಗಗಳಲ್ಲಿರುವ ಸಣ್ಣ ಹಾಗೂ ಅತಿ ಹಿಂದುಳಿದ ಸಮುದಾಯಗಳಿಗೆ ಸಾಮಾಜಿಕ ನ್ಯಾಯ ಮತ್ತು ಸಮರ್ಪಕ ಪ್ರಾತಿನಿಧ್ಯ ಕಲ್ಪಿಸಲು ಓಬಿಸಿ ವರ್ಗದೊಳಗೆ ಒಳ ಮೀಸಲಾತಿ ಜಾರಿಗೊಳಿಸುವ ನಿಟ್ಟಿನಲ್ಲಿ ಸಮಗ್ರ ಹಾಗೂ ವೈಜ್ಞಾನಿಕ ಅಧ್ಯಯನ ನಡೆಸಬೇಕು ಎಂದು ಬಿಜೆಪಿ ಓಬಿಸಿ ಮೋರ್ಚಾ ರಾಜ್ಯಾಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ರಘು ಕೌಟಿಲ್ಯ ಆಗ್ರಹಿಸಿದರು.

ನಗರದಲ್ಲಿ ಬಿಜೆಪಿ ಓಬಿಸಿ ಮೋರ್ಚಾ ವತಿಯಿಂದ ಹಮ್ಮಿಕೊಂಡಿದ್ದ ಜಿಲ್ಲಾ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸ್ವಾತಂತ್ರ್ಯ ದೊರೆತು ಸುಮಾರು ಎಂಟು ದಶಕಗಳು ಕಳೆದರೂ ಹಿಂದುಳಿದ ವರ್ಗಗಳಲ್ಲಿರುವ ಅನೇಕ ಸಣ್ಣ ಸಮುದಾಯಗಳಿಗೆ ಶಿಕ್ಷಣ, ಉದ್ಯೋಗ



ಹಾಗೂ ರಾಜಕೀಯ ಕ್ಷೇತ್ರದಲ್ಲಿ ಸಮಾನ ಅವಕಾಶ ಮತ್ತು ಸಮರ್ಪಕ ಪ್ರಾತಿನಿಧ್ಯ ದೊರೆತಿದೆಯೇ ಎಂಬುದನ್ನು ಅವಲೋಕಿಸಬೇಕಾಗಿದೆ ಎಂದರು.

ಹಿಂದುಳಿದ ವರ್ಗಗಳಲ್ಲಿಯೇ ಕೆಲವು ಸಮುದಾಯಗಳು ವಿವಿಧ ಕ್ಷೇತ್ರಗಳಲ್ಲಿ ಹೆಚ್ಚಿನ ಪ್ರಾತಿನಿಧ್ಯ ಪಡೆದಿದ್ದರೆ, ಹಲವು ಸಣ್ಣ ಹಾಗೂ ಅತಿ ಹಿಂದುಳಿದ ಸಮುದಾಯಗಳು ತಮ್ಮ ಹಕ್ಕು ಮತ್ತು ನ್ಯಾಯಯುತ ಅವಕಾಶಗಳಿಗಾಗಿ ಇಂದಿಗೂ ಹೋರಾಟ ನಡೆಸುವ ಪರಿಸ್ಥಿತಿ ಇದೆ. ಈ ಅಸಮಾನತೆಯನ್ನು ಸರಿಪಡಿಸಲು ಸರ್ಕಾರಗಳು ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ವಿಶ್ವಕರ್ಮ, ಬಡಗಿ, ಅಕ್ಕಸಾಲಿಗ, ಕಂಬಾರ, ಕುಂಬಾರ, ಮಡಿವಾಳ, ನಾವಿಗ, ಹಡಪದ, ಅಗಸ, ಗಾಣಿಗ ಸೇರಿದಂತೆ ಹಲವು ಕಾಯಕ ಸಮುದಾಯಗಳ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸ್ಥಿತಿಗತಿಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ಈ ಸಮುದಾಯಗಳಿಗೆ

2ನೇ ಪುಟಕ್ಕೆ

# ಭಕ್ತರ ಸಂಖ್ಯೆ ಹೆಚ್ಚಳ: ಮಂತ್ರಾಲಯದಲ್ಲಿ ಪರಿಮಳ ಪ್ರಸಾದ ಉತ್ಪಾದನೆ ವಿಸ್ತರಣೆಗೆ ಬೃಹತ್ ಯೋಜನೆ

ಮಂತ್ರಾಲಯ: ಶ್ರೀಕ್ಷೇತ್ರ ಮಂತ್ರಾಲಯಕ್ಕೆ ಆಗಮಿಸುವ ಭಕ್ತರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಶ್ರೀಮಠದ ಪವಿತ್ರ ಪರಿಮಳ ಪ್ರಸಾದಕ್ಕೆ ಬೇಡಿಕೆಯೂ ಗಣನೀಯವಾಗಿ ಏರಿಕೆಯಾಗಿದ್ದು, ಭಕ್ತರ ಬೇಡಿಕೆಗೆ ಅನುಗುಣವಾಗಿ ಪ್ರಸಾದ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಲು ಶ್ರೀಮಠದಿಂದ ಬೃಹತ್ ಯೋಜನೆ ಕೈಗೆತ್ತಿಕೊಳ್ಳಲಾಗಿದೆ.

ಶ್ರೀ ರಾಘವೇಂದ್ರ ಸ್ವಾಮಿಗಳ ದರ್ಶನಕ್ಕಾಗಿ ದೇಶದ ವಿವಿಧ ಭಾಗಗಳಿಂದ ಪ್ರತಿದಿನ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಮಂತ್ರಾಲಯಕ್ಕೆ ಆಗಮಿಸುತ್ತಿದ್ದು, ಭಕ್ತರಿಗೆ ವಿತರಿಸಲಾಗುವ ಪರಿಮಳ ಪ್ರಸಾದಕ್ಕೂ ಹೆಚ್ಚಿನ ಬೇಡಿಕೆ ಉಂಟಾಗಿದೆ. ಇದನ್ನು ಗಮನದಲ್ಲಿಟ್ಟುಕೊಂಡು ಶ್ರೀಮಠದ ಪೀಠಾಧಿಪತಿ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರು ಪರಿಮಳ ಪ್ರಸಾದದ ಉತ್ಪಾದನಾ ಸಾಮರ್ಥ್ಯವನ್ನು ಗಣನೀಯವಾಗಿ ಹೆಚ್ಚಿಸುವ ಉದ್ದೇಶದಿಂದ ನೂತನ ಘಟಕ ನಿರ್ಮಾಣಕ್ಕೆ ಮುಂದಾಗಿದ್ದಾರೆ.

ಯೋಜನೆಗೆ ಸಂಬಂಧಿಸಿದ ಪ್ರಮುಖ ಸಿವಿಲ್ ಕಾಮಗಾರಿಗಳು ಯಶಸ್ವಿಯಾಗಿ ಪೂರ್ಣಗೊಂಡಿದ್ದು, ನೂತನ ಘಟಕ ಕಾರ್ಯಾರಂಭಕ್ಕೆ ಸಜ್ಜಾಗುತ್ತಿದೆ. ಉಳಿದ ಅಗತ್ಯ ಸಿದ್ಧತೆಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲಾಗುತ್ತಿದ್ದು, ಮುಂದಿನ ಕೆಲವೇ ದಿನಗಳಲ್ಲಿ ಘಟಕ ಸಂಪೂರ್ಣವಾಗಿ ಕಾರ್ಯಾರಂಭ ಮಾಡುವ ನಿರೀಕ್ಷೆಯಿದೆ.

ನೂತನ ಘಟಕ ಕಾರ್ಯಾರಂಭ ಮಾಡಿದ ಬಳಿಕ ಪರಿಮಳ ಪ್ರಸಾದವನ್ನು ಹೆಚ್ಚಿನ ಪ್ರಮಾಣದಲ್ಲಿ ತಯಾರಿಸಲು ಸಾಧ್ಯವಾಗಲಿದ್ದು, ಮಂತ್ರಾಲಯಕ್ಕೆ ಆಗಮಿಸುವ ಭಕ್ತರ



ಹೆಚ್ಚುತ್ತಿರುವ ಬೇಡಿಕೆಯನ್ನು ಸಮರ್ಪಕವಾಗಿ ಪೂರೈಸಲು ಶ್ರೀಮಠಕ್ಕೆ ಅನುಕೂಲವಾಗಲಿದೆ.

ಯೋಜನೆಯ ಕಾಮಗಾರಿಗಳ ಪ್ರಗತಿ ಹಾಗೂ ನೂತನ ಘಟಕದಲ್ಲಿನ ಸಿದ್ಧತೆಗಳನ್ನು ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರು ಖುದ್ದಾಗಿ ಪರಿಶೀಲಿಸುತ್ತಿದ್ದಾರೆ. ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಿ ಘಟಕವನ್ನು ಆದಷ್ಟು ಬೇಗ ಕಾರ್ಯಾರಂಭಗೊಳಿಸಲು ಅಗತ್ಯ ಮಾರ್ಗದರ್ಶನ ನೀಡುತ್ತಿದ್ದಾರೆ.

# SIR ಕುರಿತು ಕಾಂಗ್ರೆಸ್ ಅಪಪ್ರಚಾರ; ಅಕ್ರಮ ಮತದಾರರ ವಿರುದ್ಧ ಹೋರಾಟ ಮುಂದುವರಿಯಲಿದೆ: ರಘು ಕೌಟಿಲ್ಯ

ರಾಯಚೂರು: ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR) ಪ್ರಕ್ರಿಯೆ ಕುರಿತು ಕಾಂಗ್ರೆಸ್ ಪಕ್ಷ ಸಾರ್ವಜನಿಕರಲ್ಲಿ ಗೊಂದಲ ಮೂಡಿಸುವ ರೀತಿಯಲ್ಲಿ ಅಪಪ್ರಚಾರ ನಡೆಸುತ್ತಿದೆ. ನಕಲಿ ಹಾಗೂ ಅಕ್ರಮ ಮತದಾರರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ತೆರವುಗೊಳಿಸುವ ನಿಟ್ಟಿನಲ್ಲಿ ಬಿಜೆಪಿ ತನ್ನ ಹೋರಾಟವನ್ನು ಮುಂದುವರಿಸಲಿದೆ ಎಂದು ಬಿಜೆಪಿ ರಾಜ್ಯ ಒಬಿಸಿ ಮೋರ್ಚಾ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ರಘು ಕೌಟಿಲ್ಯ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, SIR ಪ್ರಕ್ರಿಯೆ ಆರಂಭವಾದ ದಿನದಿಂದಲೂ ಕಾಂಗ್ರೆಸ್ ವಿವಿಧ ಆರೋಪಗಳನ್ನು ಮಾಡುತ್ತಿದೆ. ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆ ಸಲ್ಲಿಸುವುದು ಕಾನೂನುಬದ್ಧ ಪ್ರಕ್ರಿಯೆಯಾಗಿದ್ದು, ಅದನ್ನೇ



ತಪ್ಪಾಗಿ ಬಿಂಬಿಸುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದರು.

SIR ಪ್ರಕ್ರಿಯೆಯಲ್ಲಿ ಅರ್ಹ ಮತದಾರರ ಹೆಸರು ಸೇರ್ಪಡೆಗೆ ಫಾರ್ಮ್-6, ಮೃತಪಟ್ಟವರು, ಶಾಶ್ವತವಾಗಿ ಸ್ಥಳಾಂತರಗೊಂಡವರು, ಒಂದಕ್ಕಿಂತ ಹೆಚ್ಚು ಕಡೆ ಹೆಸರು ಹೊಂದಿರುವವರು ಅಥವಾ ಅನರ್ಹ ಮತದಾರರ ಹೆಸರು ತೆರವುಗೊಳಿಸಲು ಫಾರ್ಮ್-7 ಹಾಗೂ ವಿಳಾಸ, ಹೆಸರು, ವಯಸ್ಸು ಸೇರಿದಂತೆ ಮತದಾರರ ವಿವರಗಳ ತಿದ್ದುಪಡಿಗೆ ಫಾರ್ಮ್-8 ಬಳಸಲು ಅವಕಾಶವಿದೆ. ಈ ನಿಯಮಗಳ ಅನ್ವಯ ಆಕ್ಷೇಪಣೆ ಸಲ್ಲಿಸುವುದು ಪ್ರತಿಯೊಬ್ಬರಿಗೂ ಇರುವ ಕಾನೂನುಬದ್ಧ ಹಕ್ಕಾಗಿದೆ ಎಂದು ವಿವರಿಸಿದರು.

ಕಾಂಗ್ರೆಸ್ ಪಕ್ಷವೂ ಇದೇ ನಿಯಮಗಳಡಿ ಆಕ್ಷೇಪಣೆಗಳನ್ನು ಸಲ್ಲಿಸಿದೆ. ಆದರೆ ಬಿಜೆಪಿ ವತಿಯಿಂದ ಆಕ್ಷೇಪಣೆ ಸಲ್ಲಿಸಿದಾಗ ಅದನ್ನು ರಾಜಕೀಯವಾಗಿ ಬಿಂಬಿಸಲಾಗುತ್ತಿದೆ. ನಕಲಿ ಹಾಗೂ ಅನರ್ಹ ಮತದಾರರ ಹೆಸರುಗಳು ಪಟ್ಟಿಯಿಂದ ತೆರವಾಗುವ ಆತಂಕದಿಂದ ಕಾಂಗ್ರೆಸ್ ನಾಯಕರು ಬಿಜೆಪಿ ವಿರುದ್ಧ ಆರೋಪ ಮಾಡುತ್ತಿದ್ದಾರೆ ಎಂದು ದೂರಿದರು.

SIR ಪ್ರಕ್ರಿಯೆ

2ನೇ ಪುಟಕ್ಕೆ

# ಖಾಲಿ ನಿವೇಶನ ಸ್ವಚ್ಛಗೊಳಿಸದಿದ್ದರೆ ಪಾಲಿಕೆಯಿಂದ ದಂಡ

ರಾಯಚೂರು. ಅ.5.(ಕರ್ನಾಟಕ ವಾರ್ತೆ):- ರಾಯಚೂರು ನಗರ ವ್ಯಾಪ್ತಿಯಲ್ಲಿರುವ ಖಾಲಿ ನಿವೇಶನಗಳಲ್ಲಿ ಕಸದ ರಾಶಿ ಹಾಗೂ ಕಟ್ಟಡ ಭಗ್ನಾವಶೇಷಗಳನ್ನು ಹಾಕದೆ ಶುಚಿತ್ವ ಕಾಪಾಡಿಕೊಳ್ಳದಿದ್ದರೆ ನಿವೇಶನದಾರರಿಗೆ ₹5,000 ದಿಂದ ₹50,000 ರೂ ವರೆಗೆ ಭಾರಿ ದಂಡ ವಿಧಿಸಲಾಗುವುದು ಎಂದು ಮಹಾನಗರ ಪಾಲಿಕೆಯಿಂದ ಸಾರ್ವಜನಿಕ ಪ್ರಕಟಣೆಯ ಮೂಲಕ ತೀವ್ರ ಎಚ್ಚರಿಕೆ ನೀಡಿದೆ.

ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ-1976ರ ಕಲಂ 256, 257, 332, 333, 334 ಮತ್ತು 335 ರ ಅಡಿಯಲ್ಲಿ ಖಾಲಿ ಜಾಗಗಳಲ್ಲಿ ಅಶುಚಿತ್ವ ಉಂಟು ಮಾಡುವವರ ವಿರುದ್ಧ ಕ್ರಮ ಕೈಗೊಳ್ಳಲು ಹಾಗೂ ದಂಡ ವಿಧಿಸಲು ಪಾಲಿಕೆಗೆ ಸಂಪೂರ್ಣ ಅಧಿಕಾರವಿದೆ. ಈ ಹಿಂದೆ 2025 ರ ನವೆಂಬರ್‌ನಲ್ಲೂ ಖಾಲಿ ನಿವೇಶನಗಳ ಸ್ವಚ್ಛತೆ ಕುರಿತು ಪಾಲಿಕೆಯಿಂದ ಸಾರ್ವಜನಿಕ ಪ್ರಕಟಣೆ ಹೊರಡಿಸಲಾಗಿತ್ತು.

ನಿಯಮ ಮೀರಿದರೆ ಕಠಿಣ ಕ್ರಮ 7 ದಿನಗಳ ಗಡುವು ಈ ಪ್ರಕಟಣೆ ಹೊರಡಿಸಿದ 7 ದಿನಗಳ ಒಳಗಾಗಿ ನಿವೇಶನದಾರರು ತಮ್ಮ ಖಾಲಿ



ಜಾಗಗಳನ್ನು ಸ್ವಚ್ಛಗೊಳಿಸಬೇಕು. ಇಲ್ಲವಾದಲ್ಲಿ ಪಾಲಿಕೆಯೇ ಯಂತ್ರೋಪಕರಣ ಹಾಗೂ ಸಿಬ್ಬಂದಿಯನ್ನು ಬಳಸಿ ಸ್ವಚ್ಛಗೊಳಿಸಲಿದೆ. ನಿವೇಶನದ ವಿಸ್ತೀರ್ಣಕ್ಕೆ ಅನುಗುಣವಾಗಿ ₹5,000 ದಿಂದ ₹50,000 ರೂ ವರೆಗೆ ದಂಡ ವಿಧಿಸಲಾಗುವುದು.

ಸ್ವಚ್ಛತಾ ವೆಚ್ಚದ ದುಪ್ಪಟ್ಟು ದಂಡ: ಪಾಲಿಕೆಯಿಂದ ಕೈಗೊಳ್ಳುವ ಸ್ವಚ್ಛತಾ ಕಾರ್ಯಕ್ಕೆ ತಗಲುವ ವೆಚ್ಚವನ್ನು ನಿವೇಶನದ ವಿಸ್ತೀರ್ಣ ಹಾಗೂ ತ್ಯಾಜ್ಯದ ಪ್ರಮಾಣಕ್ಕೆ ಅನುಗುಣವಾಗಿ ಲೆಕ್ಕಹಾಕಿ, ಸದರಿ ವೆಚ್ಚದ ದುಪ್ಪಟ್ಟು ಮೊತ್ತವನ್ನು ನಿವೇಶನದ ಪಿ.ಐ.ಡಿ (ಆ) ಸಂಖ್ಯೆಗೆ ದಂಡದ ರೂಪದಲ್ಲಿ ಸೇರಿಸಲಾಗುವುದು.

ತ್ಯಾಜ್ಯ ನಿರ್ವಹಣೆ ನಿಯಮಗಳು-2016 ನಿರ್ಮಾಣ ಮತ್ತು ಕಟ್ಟಡ ಕೆಡಹುವಿಕೆ ತ್ಯಾಜ್ಯಗಳನ್ನು ಪ್ರತ್ಯೇಕವಾಗಿ ಶೇಖರಿಸಿ ನಿಯಮಾನುಸಾರ ವಿಲೇವಾರಿ ಮಾಡಬೇಕು. ತೋಟಗಾರಿಕೆ ಮತ್ತು ಕೈತೋಟದ ತ್ಯಾಜ್ಯವನ್ನು ಪಾಲಿಕೆ ಸೂಚಿಸಿದ ಸ್ಥಳಗಳಲ್ಲೇ ವಿಲೇವಾರಿ ಮಾಡಬೇಕು. ಘನತ್ಯಾಜ್ಯವನ್ನು ರಸ್ತೆ ಬದಿ, ಬೀದಿಗಳಲ್ಲಿ, ತೆರೆದ ಸಾರ್ವಜನಿಕ ಸ್ಥಳಗಳಲ್ಲಿ, ಚರಂಡಿ, ನಾಲಾ ಹಾಗೂ ಜಲಕಾಯಗಳಲ್ಲಿ ಎಸೆಯುವುದು, ಸುಡುವುದು ಅಥವಾ ಹೂಳುವುದು ಸಂಪೂರ್ಣ ನಿಷೇಧವಾಗಿದೆ,

ಘನತ್ಯಾಜ್ಯ ನಿಯಮಗಳ ಉಲ್ಲಂಘನೆಯು ಪರಿಸರ ಸಂರಕ್ಷಣಾ ಕಾಯ್ದೆ 1986ರ ಅಡಿಯಲ್ಲಿ ಗಂಭೀರ ಶಿಕ್ಷಾರ್ಹ ಅಪರಾಧವಾಗಿದ್ದು, ತಪ್ಪಿತಸ್ಥರಿಗೆ ದಂಡದ ಜೊತೆಗೆ ಕಾರಾಗೃಹವಾಸ (ಜೈಲು) ಶಿಕ್ಷೆಯೂ ವಿಧಿಸಲು ಅವಕಾಶವಿದೆ. ಆದ್ದರಿಂದ ಸಾರ್ವಜನಿಕರು ಹಾಗೂ ನಿವೇಶನದಾರರು ತಕ್ಷಣವೇ ತಮ್ಮ ಖಾಲಿ ಜಾಗಗಳನ್ನು ಸ್ವಚ್ಛಗೊಳಿಸಿ ಮಹಾನಗರ ಪಾಲಿಕೆಯೊಂದಿಗೆ ಸಹಕರಿಸಬೇಕಾಗಿ ರಾಯಚೂರು ಮಹಾನಗರ ಆಯುಕ್ತರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಿಶಿಷ್ಟ ಜಾತಿ ಪಟ್ಟಿಯಿಂದ ನಾಲ್ಕು ಸಮುದಾಯಗಳ ಕೈಬಿಡಲು ಕಾನೂನು ಹೋರಾಟ: ಮಹೇಂದ್ರ ಕುಮಾರ್ ಮಿತ್ರ

ರಾಯಚೂರು: ಕರ್ನಾಟಕದ ಪರಿಶಿಷ್ಟ ಜಾತಿಗಳ ಪಟ್ಟಿಯಲ್ಲಿರುವ ಲಂಬಾಣಿ, ಭೋವಿ, ಕೊರಚ ಮತ್ತು ಕೊರಮ ಸಮುದಾಯಗಳನ್ನು ಪಟ್ಟಿಯಿಂದ ಕೈಬಿಡುವಂತೆ ಕೋರಿ ನಡೆಸುತ್ತಿರುವ ಕಾನೂನು ಹೋರಾಟ ಮುಂದುವರಿದಿದ್ದು, ಈ ಸಂಬಂಧ ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗವು ವರದಿ ಸಲ್ಲಿಸುವಂತೆ ನ್ಯಾಯಾಲಯ ಸೂಚಿಸಿದೆ ಎಂದು ಡಾ. ಅಂಬೇಡ್ಕರ್ ಪರಿಶಿಷ್ಟ ಜಾತಿಗಳ ಒಕ್ಕೂಟದ ರಾಜ್ಯಾಧ್ಯಕ್ಷ ಮಹೇಂದ್ರ ಕುಮಾರ್ ಮಿತ್ರ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇವಮಿತ್ರ ವಕೀಲರು, ಮಾರುತಿರಾವ್ ಜಂಬಗಾ, ಕೃಷ್ಣ ಸಿ.ಎಂ. ಹಾಗೂ ತಮ್ಮ ನೇತೃತ್ವದಲ್ಲಿ 2019ರ ಮೇ 14ರಂದು ಲಂಬಾಣಿ, ಭೋವಿ, ಕೊರಚ ಮತ್ತು ಕೊರಮ ಸಮುದಾಯಗಳನ್ನು ಪರಿಶಿಷ್ಟ ಜಾತಿಗಳ ಪಟ್ಟಿಯಿಂದ ಕೈಬಿಡುವಂತೆ ಕೋರಿ



ಸಂವಿಧಾನದ ಅನುಚ್ಛೇದ 32ರಡಿ ಸುಪ್ರೀಂ ಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಲಾಗಿತ್ತು ಎಂದು ಹೇಳಿದರು.

2020ರ ಫೆಬ್ರವರಿ 14ರಂದು ಅರ್ಜಿಯ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್, ನಾಲ್ಕು ವಾರಗಳೊಳಗೆ ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗಕ್ಕೆ ಮನವಿ ಸಲ್ಲಿಸುವಂತೆ ಸೂಚಿಸಿತ್ತು. ಅದರಂತೆ ಫೆಬ್ರವರಿ 27ರಂದು ಆಯೋಗಕ್ಕೆ ಮನವಿ ಸಲ್ಲಿಸಲಾಗಿತ್ತು. ನಂತರ ಆಯೋಗವು ಕರ್ನಾಟಕ ಸರ್ಕಾರದಿಂದ ಅಗತ್ಯ ಶಿಫಾರಸು ಮತ್ತು ಮಾಹಿತಿಯನ್ನು ಪಡೆಯುವ ಸಂಬಂಧ ಕ್ರಮ ಕೈಗೊಂಡಿತ್ತು ಎಂದು ವಿವರಿಸಿದರು.

2020ರ ಮಾರ್ಚ್ 12 ಹಾಗೂ ಮೇ 14ರಂದು ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗವು ರಾಜ್ಯ ಸರ್ಕಾರಕ್ಕೆ ಪತ್ರ ಬರೆದು ಈ ವಿಷಯಕ್ಕೆ ಸಂಬಂಧಿಸಿದ ಶಿಫಾರಸನ್ನು ತ್ವರಿತವಾಗಿ ಸಲ್ಲಿಸುವಂತೆ ಸೂಚಿಸಿತ್ತು. ಆದರೆ 2023ರ ಫೆಬ್ರವರಿ 16ರಂದು ರಾಜ್ಯದ ಮುಖ್ಯ ಕಾರ್ಯದರ್ಶಿಗಳು ನಾಲ್ಕು ಸಮುದಾಯಗಳನ್ನು ಪರಿಶಿಷ್ಟ ಜಾತಿಗಳ ಪಟ್ಟಿಯಲ್ಲಿಯೇ ಮುಂದುವರಿಸುವ ನಿಲುವನ್ನು ಆಯೋಗಕ್ಕೆ ತಿಳಿಸಿದ್ದರು ಎಂದು ಮಹೇಂದ್ರ ಕುಮಾರ್ ಮಿತ್ರ ಆರೋಪಿಸಿದರು.

ಇದನ್ನು ಪ್ರಶ್ನಿಸಿ ಮತ್ತೆ ಸುಪ್ರೀಂ ಕೋರ್ಟ್ ಮೊರೆ ಹೋಗಲಾಗಿದ್ದು, ಹೈಕೋರ್ಟ್‌ನಲ್ಲಿ ಪರಿಹಾರ ಕಂಡುಕೊಳ್ಳುವಂತೆ ಸಲಹೆ ದೊರೆತ ಹಿನ್ನೆಲೆಯಲ್ಲಿ 2023ರ ಅಕ್ಟೋಬರ್ 25ರಂದು ಹೈಕೋರ್ಟ್‌ನಲ್ಲಿ ರಿಟ್ ಅರ್ಜಿ ಸಲ್ಲಿಸಲಾಯಿತು. 2024ರ ಏಪ್ರಿಲ್ 4ರಂದು ಹೈಕೋರ್ಟ್ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಗೆ ನೋಟಿಸ್

2ನೇ ಪುಟಕ್ಕೆ

# ಹತ್ತಿ ಜಿನ್ನಿಂಗ್ ಘಟಕದಲ್ಲಿ ಅಗ್ನಿ ಅವಘಡ; ಲಕ್ಷಾಂತರ ರೂ. ನಷ್ಟ

ದೇವದುರ್ಗ: ನಗರದ ಭಾರತ ಕಾಟನ್ ಜಿನ್ನಿಂಗ್ ಫ್ಯಾಕ್ಟರಿಯಲ್ಲಿ ಆಕಸ್ಮಿಕವಾಗಿ ಬೆಂಕಿ ಕಾಣಿಸಿಕೊಂಡ ಪರಿಣಾಮ ಅಪಾರ ಪ್ರಮಾಣದ ಹತ್ತಿ ಸುಟ್ಟು ಕರಕಲಾಗಿದ್ದು, ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿದೆ ಎಂದು ಅಂದಾಜಿಸಲಾಗಿದೆ.

ಕಾರ್ಖಾನೆಯಲ್ಲಿ ಹತ್ತಿ ಸಂಗ್ರಹಿಸಿದ್ದ ಪ್ರದೇಶದಲ್ಲಿ ಬೆಂಕಿ ಕಾಣಿಸಿಕೊಂಡು ಕೆಲವೇ ಸಮಯದಲ್ಲಿ ವ್ಯಾಪಕವಾಗಿ ಹರಡಿದೆ. ಮಾಹಿತಿ ತಿಳಿದ ಕೂಡಲೇ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಸಿಬ್ಬಂದಿ ವಾಹನದೊಂದಿಗೆ ಸ್ಥಳಕ್ಕೆ ಧಾವಿಸಿ ಬೆಂಕಿ ನಿಯಂತ್ರಿಸಲು ಕಾರ್ಯಾಚರಣೆ ನಡೆಸಿದರು. ಅಗ್ನಿ ಅವಘಡಕ್ಕೆ ನಿಖರ ಕಾರಣ ಹಾಗೂ ಸಂಭವಿಸಿರುವ ಒಟ್ಟು ನಷ್ಟದ ಪ್ರಮಾಣ ಇನ್ನಷ್ಟೇ ತಿಳಿದುಬರಬೇಕಿದೆ.

ಘಟನೆ ಹಿನ್ನೆಲೆಯಲ್ಲಿ ದೇವದುರ್ಗ ಅಗ್ನಿಶಾಮಕ ಠಾಣೆಯಲ್ಲಿರುವ ಸೌಲಭ್ಯಗಳ ಕೊರತೆಯ ಕುರಿತು ಜಿನ್ನಿಂಗ್ ಕಾರ್ಖಾನೆ ಮಾಲೀಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಪಟ್ಟಣದ ಅಗ್ನಿಶಾಮಕ ಠಾಣೆಯಲ್ಲಿ ಅಗತ್ಯಕ್ಕೆ ತಕ್ಕಷ್ಟು ವಾಹನಗಳು ಲಭ್ಯವಿಲ್ಲ. ಕೇವಲ ಒಂದು ಅಗ್ನಿಶಾಮಕ ವಾಹನವನ್ನು ಅವಲಂಬಿಸಬೇಕಾದ ಪರಿಸ್ಥಿತಿ ಇರುವುದರಿಂದ ಏಕಕಾಲದಲ್ಲಿ ವಿವಿಧೆಡೆ ತುರ್ತು ಘಟನೆಗಳು ಸಂಭವಿಸಿದರೆ ಸಮರ್ಪಕವಾಗಿ ಸ್ಪಂದಿಸುವುದು ಕಷ್ಟವಾಗುತ್ತದೆ ಎಂದು ಅವರು ಆರೋಪಿಸಿದ್ದಾರೆ.

ದೇವದುರ್ಗ ಭಾಗದಲ್ಲಿ 15ಕ್ಕೂ ಹೆಚ್ಚು ಹತ್ತಿ ಜಿನ್ನಿಂಗ್ ಕೈಗಾರಿಕೆಗಳು ಕಾರ್ಯನಿರ್ವಹಿಸುತ್ತಿದ್ದು, ಪ್ರತಿದಿನ ಕೋಟ್ಯಂತರ ರೂಪಾಯಿ ವಹಿವಾಟು ನಡೆಯುತ್ತಿದೆ. ಹತ್ತಿಯಂತಹ ಸುಲಭವಾಗಿ ಬೆಂಕಿ ಹೊತ್ತಿಕೊಳ್ಳುವ ವಸ್ತುಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಸಂಗ್ರಹಿಸುವ ಕೈಗಾರಿಕೆಗಳು ಇರುವುದರಿಂದ ಅಗ್ನಿ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕಾಗಿದೆ ಎಂದು ಮಾಲೀಕರು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಸ್ಥಳೀಯ ಶಾಸಕರು ಹಾಗೂ ಸಂಬಂಧಪಟ್ಟ ಅಧಿಕಾರಿಗಳು



ಸರ್ಕಾರದ ಗಮನ ಸೆಳೆದು ದೇವದುರ್ಗ ಅಗ್ನಿಶಾಮಕ ಠಾಣೆಗೆ ಹೆಚ್ಚುವರಿ ಅಗ್ನಿಶಾಮಕ ವಾಹನಗಳು, ಅಗತ್ಯ ಸಿಬ್ಬಂದಿ ಹಾಗೂ ಆಧುನಿಕ ಅಗ್ನಿ ನಿಯಂತ್ರಣ ಉಪಕರಣಗಳನ್ನು ಒದಗಿಸಲು ಕ್ರಮ ಕೈಗೊಳ್ಳಬೇಕು. ಭವಿಷ್ಯದಲ್ಲಿ ಇಂತಹ ಅವಘಡಗಳು ಸಂಭವಿಸಿದಾಗ ತ್ವರಿತವಾಗಿ ಕಾರ್ಯಾಚರಣೆ ನಡೆಸಿ ಜೀವ ಮತ್ತು ಆಸ್ತಿ ಹಾನಿಯನ್ನು ತಗ್ಗಿಸಲು ಅಗ್ನಿಶಾಮಕ ಠಾಣೆಯನ್ನು ಅಗತ್ಯ ಮೂಲಸೌಕರ್ಯಗಳೊಂದಿಗೆ ಬಲಪಡಿಸಬೇಕು ಎಂದು ಜಿನ್ನಿಂಗ್ ಕಾರ್ಖಾನೆ ಮಾಲೀಕರು ಒತ್ತಾಯಿಸಿದ್ದಾರೆ.

# ವಿಕಲಚೇತನರ ವಿವಿಧ ಯೋಜನೆಗಳ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ರಾಯಚೂರು ಅ.5.(ಕರ್ನಾಟಕ ವಾರ್ತೆ):- ಜಿಲ್ಲೆಯ ವಿಕಲಚೇತನರ ಆರ್ಥಿಕ ಹಾಗೂ ಸಾಮಾಜಿಕ ಸಬಲೀಕರಣಕ್ಕಾಗಿ 2026-27ನೇ ಸಾಲಿನ ವಿವಿಧ ಸರ್ಕಾರಿ ಯೋಜನೆಗಳಡಿ ಸೌಲಭ್ಯ ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಬೆಂಗಳೂರಿನ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯದ ಸೂಚನೆ ಮೇರೆಗೆ ರಾಯಚೂರು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯು ಈ ಕೆಳಗಿನ ಪ್ರಮುಖ ಫಲಾನುಭವಿ ಆಧಾರಿತ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿದೆ:

ಆರೈಕೆದಾರರ ಪ್ರೋತ್ಸಾಹ ಧನ ಯೋಜನೆ: ಸೆರೆಬ್ರಲ್ ಪಾಲ್ಸಿ, ಮಸ್ಕುಲರ್ ಡಿಸ್ಟ್ರೋಫಿ, ಪಾರ್ಕಿನ್ಸನ್ಸ್, ಮಲ್ಟಿಪಲ್ ಸ್ಕ್ಲೆರೋಸಿಸ್, ಬೌದ್ಧಿಕ ವಿಕಲತೆ (ಮೆಂಟಲ್ ರಿಟಾರ್ಡೇಶನ್), ಆಟಿಸಂ ಹಾಗೂ ಬಹುವಿಧ ಅಂಗವಿಕಲತೆ (ಶ್ರವಣ ಮತ್ತು ದೃಷ್ಟಿದೋಷ) ಹೊಂದಿರುವ ವಿಕಲಚೇತನ ವ್ಯಕ್ತಿಗಳನ್ನು ಆರೈಕೆ ಮಾಡುವವರಿಗೆ ಈ ಯೋಜನೆಯಡಿ ಪ್ರೋತ್ಸಾಹ ಧನ ನೀಡಲಾಗುತ್ತದೆ.

ಶುಲ್ಕ ಮರುಪಾವತಿ ಯೋಜನೆ: ಎಸ್ಎಸ್ಎಲ್‌ಸಿ ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ ಹಾಗೂ ಔದ್ಯೋಗಿಕ ಶಿಕ್ಷಣದಲ್ಲಿ ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳು ಶುಲ್ಕ ಮರುಪಾವತಿಗೆ ಅರ್ಜಿ ಸಲ್ಲಿಸಬಹುದು.

ನಿರಾಮಯ ಯೋಜನೆ: ಬುದ್ಧಿಮಾಂದ್ಯತೆ, ಸೆರೆಬ್ರಲ್ ಪಾಲ್ಸಿ, ಆಟಿಸಂ ಹಾಗೂ ಬಹುವಿಧ ಅಂಗವಿಕಲತೆ ಹೊಂದಿರುವ ವ್ಯಕ್ತಿಗಳ ಆರೋಗ್ಯ ಸುಧಾರಣೆ ಮತ್ತು ರಕ್ಷಣೆಗಾಗಿ ನಿರಾಮಯ ಯೋಜನೆಯಡಿ ಸೌಲಭ್ಯ ದೊರೆಯಲಿದೆ.

ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಅಕ್ಟೋಬರ್ 30 2026 ರೊಳಗಾಗಿ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ರಾಯಚೂರು ಕಚೇರಿ ಸಮಯದಲ್ಲಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ, ರಾಜಮಾತಾ ದೇವಸ್ಥಾನದ ಹತ್ತಿರ, ಆಫೀಸರ್ಸ್ ಕಾಲೋನಿ, ಆಶಾಪೂರು ರೋಡ್‌ನಲ್ಲಿರುವ ಕಛೇರಿಗೆ ನೇರವಾಗಿ ಅರ್ಜಿಗಳನ್ನು ಸಲ್ಲಿಸಬಹುದು.

ತಾಲ್ಲೂಕುವಾರು ಸಂಪರ್ಕಿಸಬೇಕಾಗದ ಮಾಹಿತಿಯು ಯೋಜನೆಗಳಿಗೆ ಸಂಬಧಿಸಿದ ಮಾರ್ಗದರ್ಶನಕ್ಕಾಗಿ ಇಲಾಖೆಯ ಸಹಾಯವಾಣಿ ಅಥವಾ ಆಯಾ ತಾಲೂಕಿನ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರಾದ, ಶ್ರೀ ಅಮರೇಶ ಯಾದವ್ (9972237508) ಮಾನವಿ-ಸಿರವಾರ: ಶ್ರೀ ರಾಘವೇಂದ್ರ (ಪ್ರಭಾರಿ) (9740203769) ದೇವದುರ್ಗ: ಶ್ರೀ ಲೋಕಪ್ಪ ನೂರು ನಾಯ್ಕೆ (9945207693) ಸಿಂಧನೂರು: ಶ್ರೀ ಬಸವರಾಜ ಸಾಸಲಮರಿ (9900298217) ಲಿಂಗಸಗೂರು-ಮಸ್ಕಿ: ಶ್ರೀ ನಾಗರಾಜ (9901668380).

ಜಿಲ್ಲೆಯ ಅರ್ಹ ವಿಕಲಚೇತನರು ನಿಗದಿತ ದಿನಾಂಕದೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿ ಈ ಯೋಜನೆಗಳ ಪ್ರಯೋಜನ ಪಡೆದುಕೊಳ್ಳುವಂತೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೊಪ್ಪಳ ಲೋಕಾಯುಕ್ತ ಪೊಲೀಸರಿಂದ ಅ.09 ರಂದು ಜನ ಸಂಪರ್ಕ ಸಭೆ

ಕೊಪ್ಪಳ, ಅ. 05, (ಕರ್ನಾಟಕ ವಾರ್ತೆ): ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ನಿರ್ದೇಶನದಂತೆ ಕರ್ನಾಟಕ ಲೋಕಾಯುಕ್ತ, ಕೊಪ್ಪಳ ಕಛೇರಿಯ ಪೊಲೀಸ್ ಅಧಿಕಾರಿಗಳಿಂದ ಅಕ್ಟೋಬರ್ 09 ರ ಶುಕ್ರವಾರದಂದು ಬೆಳಿಗ್ಗೆ 11 ಗಂಟೆಯಿದ ಮಧ್ಯಾಹ್ನ 1:30 ಗಂಟೆಯವರೆಗೆ ಯಲಬುರ್ಗಾದ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಸಾರ್ವಜನಿಕ ಕುಂದು-ಕೊರತೆಗಳ ಅಹವಾಲು ಸ್ವೀಕರಿಸುವ ಪ್ರಯುಕ್ತ ಸಭೆಗೆ ಸರ್ಕಾರದ ಎಲ್ಲ ಕಚೇರಿಗಳ ತಾಲೂಕುಮಟ್ಟದ ಸರಕಾರಿ ಅಧಿಕಾರಿಗಳು ಹಾಜರಿರುತ್ತಾರೆ. ಆದ್ದರಿಂದ ಸಾರ್ವಜನಿಕರು ತಮ್ಮ ಕುಂದು-ಕೊರತೆಗಳನ್ನು, ಅಹವಾಲುಗಳನ್ನು ಹಾಗೂ ತಮ್ಮ ಸರಕಾರಿ ಕೆಲಸಗಳಿಗೆ ಸಂಬಧಿಸಿದತೆ ಯಾವುದೇ ಸರಕಾರಿ ಕಛೇರಿಗಳಲ್ಲಿ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ಮಾಡಿಕೊಡಲು ಅಧಿಕಾರಿಗಳು ಉದ್ದೇಶ ಪೂರ್ವಕವಾಗಿ ವಿಳಂಬ ಮಾಡುತ್ತಿರುವ ಬಗ್ಗೆ, ಸರಕಾರಿ ಅಧಿಕಾರಿಗಳು ಸರಕಾರದ ಯೋಜನೆಗಳ ಲಾಭವನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವಲ್ಲಿ ಉದ್ದೇಶ ಪೂರ್ವಕ ತಾರತಮ್ಯ ಮಾಡುತ್ತಿರುವ ಬಗ್ಗೆ, ಕಳಪೆ ಕಾಮಗಾರಿ ನಡೆಸಿ ಹಣ ದುರುಪಯೋಗ ಪಡಿಸಿದ ದೂರುಗಳ ಬಗ್ಗೆ, ಯಾವುದೇ ಸರಕಾರಿ ಅಧಿಕಾರಿಯು ತಾನು ಕರ್ತವ್ಯ ನಿರ್ವಹಿಸಲು ನಿಯೋಜಿಸಿದ ಕರ್ತವ್ಯವನ್ನು ನಿರ್ವಹಿಸುವಲ್ಲಿ ದುರಾಡಳಿತ ಪ್ರದರ್ಶಿಸುವಂತಹ ಅಧಿಕಾರಿಗಳ ಮೇಲೆ ಲಿಖಿತ ದೂರನ್ನು ದಾಖಲಿಸಬಹುದು.

ಪ್ರಪತ್ರ 1 ಮತ್ತು 2 ರಲ್ಲಿ ಅಫಿಡವಿಟ್‌ನೊಂದಿಗೆ ಅಗತ್ಯ ದಾಖಲಾತಿಗಳನ್ನು ಲಗತ್ತಿಸಿ ಲಿಖಿತ ದೂರನ್ನು ಸಲ್ಲಿಸಬಹುದಾಗಿದೆ. ನ್ಯಾಯಾಲಯದಲ್ಲಿ ವಿಚಾರಣೆ ಬಾಕಿ ಇರುವಂತಹ ಪ್ರಕರಣಗಳಿಗೆ ಸಂಬಧಿಸಿದ ದೂರುಗಳಿದ್ದಲ್ಲಿ ಸ್ವೀಕರಿಸಲಾಗುವುದಿಲ್ಲ ಎಂದು ಕರ್ನಾಟಕ ಲೋಕಾಯುಕ್ತ ಕೊಪ್ಪಳ ಕಚೇರಿಯ ಪೊಲೀಸ್ ಉಪಾಧೀಕ್ಷಕರಾದ ವಿಜಯ ಬಿರಾದಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಮೃತ ವಾಣಿ

ಉಂಡವನು ಹರಸಬೇಕಿಲ್ಲ ಪುಣ್ಯ ತಾನಾಗಿಯೇ ಬರುತ್ತದೆ.

## 1607 ನೇಯ ದಿನಕ್ಕೆ ಏಮ್ಸ್ ಹೋರಾಟ

# ಇಂದು ಸಿಂಧನೂರಿನಲ್ಲಿ ಸಿಎಸ್‌ಸಿ ಹಾಗೂ ಸಾಲ ವಸೂಲಾತಿ ಕುರಿತು ವಿಶೇಷ ತರಬೇತಿ

ಸಿಂಧನೂರು, ಅ.4: ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಾಹಕರು ಹಾಗೂ ಗಣಕಯಂತ್ರ ನಿರ್ವಾಹಕರಿಗೆ ಸಾಮಾನ್ಯ ಸೇವಾ ಕೇಂದ್ರ (ಸಿಎಸ್‌ಸಿ) ಮತ್ತು ಸಾಲ ವಸೂಲಾತಿ ಕ್ರಮಗಳ ಕುರಿತು ಒಂದು ದಿನದ ವಿಶೇಷ ತರಬೇತಿ ಕಾರ್ಯಕ್ರಮವನ್ನು ಇಂದು ಬೆಳಿಗ್ಗೆ 10.30ಕ್ಕೆ ನಗರದ ಗಂಗಾವತಿ ರಸ್ತೆಯ ತುಂಗಭದ್ರ ಸೌಹಾರ್ದ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟ, ರಾಯಚೂರು-ಕೊಪ್ಪಳ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್, ಸಹಕಾರ ಇಲಾಖೆ ಹಾಗೂ ಸಿಂಧನೂರು ಉಪವಿಭಾಗದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಸಂಯುಕ್ತ ಆಶ್ರಯದಲ್ಲಿ ತರಬೇತಿ ನಡೆಯಲಿದೆ.

ಸಿಂಧನೂರು ಉಪವಿಭಾಗದ ಸಿಂಧನೂರು, ಮಸ್ಕಿ ಹಾಗೂ ಲಿಂಗಸೂಗೂರು ತಾಲೂಕುಗಳ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಕಾರ್ಯನಿರ್ವಹಣೆಯನ್ನು ಮತ್ತಷ್ಟು ಪರಿಣಾಮಕಾರಿಗೊಳಿಸುವ ಉದ್ದೇಶದಿಂದ ತರಬೇತಿ ಹಮ್ಮಿಕೊಳ್ಳಲಾಗಿದೆ.

ಸಂಪನ್ಮೂಲ ವ್ಯಕ್ತಿಯಾಗಿ ಸಿಎಸ್‌ಸಿ ರಾಯಚೂರು ಜಿಲ್ಲಾ ವ್ಯವಸ್ಥಾಪಕ ಮಹಮ್ಮದ್ ನಜೀಮುದ್ದೀನ್ ಭಾಗವಹಿಸಿ ಸಾಮಾನ್ಯ ಸೇವಾ ಕೇಂದ್ರಗಳ (Common Service Centre ) ಕಾರ್ಯವಿಧಾನ ಹಾಗೂ ಸೇವೆಗಳ ಕುರಿತು ಮಾಹಿತಿ ನೀಡಲಿದ್ದಾರೆ.

ಸಿಂಧನೂರು ಉಪವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕ ಸಜ್ಜನ ಪ್ರಕಾಶ ಅವರು ಗುಣಾತ್ಮಕ ಸಾಲ ವಿತರಣೆ, ಸಾಲ ನಿರ್ವಹಣೆ ಹಾಗೂ ಪರಿಣಾಮಕಾರಿ ಸಾಲ ವಸೂಲಾತಿ ಕ್ರಮಗಳ ಕುರಿತು ಉಪನ್ಯಾಸ ನೀಡಲಿದ್ದಾರೆ.

ಸಿಂಧನೂರು, ಮಸ್ಕಿ ಮತ್ತು ಲಿಂಗಸೂಗೂರು ತಾಲೂಕುಗಳ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಾಹಕರು ಹಾಗೂ ಗಣಕಯಂತ್ರ ನಿರ್ವಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತರಬೇತಿಯ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಸಹಕಾರ ಸಂಘಗಳ ಸಹಾಯಕ ನಿಬಂಧಕ ಸಜ್ಜನ ಪ್ರಕಾಶ ಹಾಗೂ ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಾಯತ್ರಿ ವೈ. ಪ್ರಕಟಣೆಯಲ್ಲಿ ಕೋರಿದ್ದಾರೆ.




# ಅ.23ಕ್ಕೆ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ: ನೋಂದಾಯಿತ ಮತದಾರರಿಗೆ ರಜೆ ಘೋಷಣೆ

ಕಲಬುರಗಿ, ಅ.5: ಕರ್ನಾಟಕ ವಿಧಾನ ಪರಿಷತ್ತಿನ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಗೆ ಅಕ್ಟೋಬರ್ 23ರಂದು ಮತದಾನ ನಡೆಯಲಿದ್ದು, ಕ್ಷೇತ್ರದ ನೋಂದಾಯಿತ ಮತದಾರರು ಮತ ಚಲಾಯಿಸಲು ಅನುಕೂಲವಾಗುವಂತೆ ರಜೆ ಘೋಷಿಸಲಾಗಿದೆ.

ಅಕ್ಟೋಬರ್ 23ರಂದು ಬೆಳಿಗ್ಗೆ 8ರಿಂದ ಸಂಜೆ 4 ಗಂಟೆಯವರೆಗೆ ಕ್ಷೇತ್ರದಾದ್ಯಂತ ಮತದಾನ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಮತದಾರರ ಪಟ್ಟಿಯಲ್ಲಿ ನೋಂದಾಯಿತರಾಗಿರುವ ಮತದಾರರು ತಮ್ಮ ಮತದಾನದ ಹಕ್ಕು ಚಲಾಯಿಸಲು ಅನುಕೂಲವಾಗುವಂತೆ ಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಹೀರಾ ನಸೀಮ್ ರಜೆ ಘೋಷಿಸಿದ್ದಾರೆ.

ಮತ ಎಣಿಕೆ ಕಾರ್ಯ ಅಕ್ಟೋಬರ್ 27ರಂದು ಬೆಳಿಗ್ಗೆ 8 ಗಂಟೆಯಿಂದ ಕಲಬುರಗಿಯ ಗುಲಬರ್ಗಾ ವಿಶ್ವವಿದ್ಯಾಲಯದ ಗಣಿತ ವಿಭಾಗದ ಭಾಸ್ಕರ ಸಭಾಂಗಣದಲ್ಲಿ ನಡೆಯಲಿದೆ.

ಮತ ಎಣಿಕೆ ಹಿನ್ನೆಲೆಯಲ್ಲಿ ಅಂದು ಗಣಿತ ವಿಭಾಗದ ಕಟ್ಟಡ ಹಾಗೂ ಭದ್ರತಾ ಕೊಠಡಿಗೆ ಸಂಬಂಧಿಸಿದ ಎಲ್ಲ ಸಿಬ್ಬಂದಿಗೂ ರಜೆ ಘೋಷಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ: ಮತ ಎಣಿಕೆ ಕೇಂದ್ರಕ್ಕೆ ಮೊಬೈಲ್ ಸೇರಿದಂತೆ ಹಲವು ವಸ್ತುಗಳ ನಿಷೇಧ

ಕಲಬುರಗಿ, ಅ.5: ಕರ್ನಾಟಕ ವಿಧಾನ ಪರಿಷತ್ತಿನ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಯ ಮತ ಎಣಿಕೆ ಅಕ್ಟೋಬರ್ 27ರಂದು ಬೆಳಿಗ್ಗೆ 8 ಗಂಟೆಯಿಂದ ಕಲಬುರಗಿಯ ಗುಲಬರ್ಗಾ ವಿಶ್ವವಿದ್ಯಾಲಯದ ಗಣಿತ ವಿಭಾಗದ ಭಾಸ್ಕರ ಸಭಾಂಗಣದಲ್ಲಿ ನಡೆಯಲಿದೆ.

ಮತ ಎಣಿಕೆ ಕಾರ್ಯವನ್ನು ಸುಗಮ ಹಾಗೂ ಶಾಂತಿಯುತವಾಗಿ ನಡೆಸುವ ಉದ್ದೇಶದಿಂದ ಮತ ಎಣಿಕೆ ಕೇಂದ್ರದೊಳಗೆ ಮೊಬೈಲ್ ಫೋನ್ ಸೇರಿದಂತೆ ಹಲವು ವಸ್ತುಗಳನ್ನು ಕೊಂಡೊಯ್ಯುವುದನ್ನು ನಿಷೇಧಿಸಲಾಗಿದೆ.

ಬೆಂಕಿ ಪೊಟ್ಟಣ, ಲೈಟರ್, ಫೌಂಟೇನ್ ಇಂಕ್ ಪೆನ್, ಮೊಬೈಲ್ ಫೋನ್, ಸಿಗರೇಟ್, ಪಾನ್, ಬೀಡಾ, ತಂಬಾಕು ಹಾಗೂ ನೀರಿನ ಬಾಟಲ್‌ಗಳನ್ನು ಮತ ಎಣಿಕೆ ಕೇಂದ್ರದೊಳಗೆ ತೆಗೆದುಕೊಂಡು ಹೋಗುವಂತಿಲ್ಲ ಎಂದು ಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಹೀರಾ ನಸೀಮ್ ಆದೇಶಿಸಿದ್ದಾರೆ.

ಇದಲ್ಲದೆ, ಮತ ಎಣಿಕೆ ನಡೆಯುವ ಅಕ್ಟೋಬರ್ 27ರಂದು ಗುಲಬರ್ಗಾ ವಿಶ್ವವಿದ್ಯಾಲಯದ ಆವರಣಕ್ಕೆ ಖಾಸಗಿ ವಾಹನಗಳ ಪ್ರವೇಶವನ್ನೂ ನಿರ್ಬಂಧಿಸಲಾಗಿದೆ. ಅಭ್ಯರ್ಥಿಗಳು ಹಾಗೂ ಪತ್ರಕರ್ತರ ವಾಹನಗಳಿಗೆ ಮಾತ್ರ ಈ ನಿರ್ಬಂಧದಿಂದ ವಿನಾಯಿತಿ ನೀಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಈಶಾನ್ಯ ಶಿಕ್ಷಕರ ಕ್ಷೇತ್ರ ಚುನಾವಣೆ: ಆರು ಅಭ್ಯರ್ಥಿಗಳಿಂದ 10 ನಾಮಪತ್ರ ಸಲ್ಲಿಕೆ




ಕಲಬುರಗಿ, ಅ.5: ಕರ್ನಾಟಕ ವಿಧಾನ ಪರಿಷತ್ತಿನ ಈಶಾನ್ಯ ಶಿಕ್ಷಕರ ಕ್ಷೇತ್ರದ ಒಂದು ಸ್ಥಾನಕ್ಕೆ ನಡೆಯಲಿರುವ ಚುನಾವಣೆಗೆ ಸೋಮವಾರ ಆರು ಅಭ್ಯರ್ಥಿಗಳಿಂದ ಒಟ್ಟು 10 ನಾಮಪತ್ರಗಳು ಸಲ್ಲಿಕೆಯಾಗಿವೆ ಎಂದು ಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಹೀರಾ ನಸೀಮ್ ತಿಳಿಸಿದ್ದಾರೆ.

ಭಾರತೀಯ ಜನತಾ ಪಕ್ಷದ ಅಭ್ಯರ್ಥಿ ಶಶೀಲ್ ಜಿ. ನಮೋಶಿ ಅವರು ಮೂರು ನಾಮಪತ್ರಗಳನ್ನು ಸಲ್ಲಿಸಿದ್ದು, ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಶರಣಪ್ಪ ಮಟ್ಟೂರ ಅವರು ಕೂಡ ಮೂರು ನಾಮಪತ್ರಗಳನ್ನು ಸಲ್ಲಿಸಿದ್ದಾರೆ.

ಪಕ್ಷೇತರ ಅಭ್ಯರ್ಥಿಗಳಾಗಿ ಮಹೆಬೂಬ್ ತಂದೆ ಮಹ್ಮದ್ ಖಾಜಿ ಹುಸೇನ ವಂಟೆಳಿ, ರಾಜಕುಮಾರ ತಂದೆ ಮಾಣಿಕಪ್ಪ, ಶಿವಶಂಕರ ತಂದೆ ಅಣ್ಣಪ್ಪ ಹಾಗೂ ತುಳಸಪ್ಪ ದಾಸರ ತಂದೆ ಕರಿಯಪ್ಪ ದಾಸರ ಅವರು ತಲಾ ಒಂದೊಂದು ನಾಮಪತ್ರ ಸಲ್ಲಿಸಿದ್ದಾರೆ.

ಸೋಮವಾರ ಸಲ್ಲಿಕೆಯಾದ 10 ನಾಮಪತ್ರಗಳನ್ನು ಒಳಗೊಂಡಂತೆ ಈವರೆಗೆ ಒಟ್ಟು ಒಂಬತ್ತು ಅಭ್ಯರ್ಥಿಗಳಿಂದ 15 ನಾಮಪತ್ರಗಳು ಸಲ್ಲಿಕೆಯಾಗಿವೆ ಎಂದು ಚುನಾವಣಾಧಿಕಾರಿಗಳು ಮಾಹಿತಿ ನೀಡಿದ್ದಾರೆ.

## ಮೊದಲನೇ ಪುಟದಿಂದ

# ಫಾರ್ಮ್-6 ಬದಲಾವಣೆಗೆ ಅನುಮೋದನೆ ನೀಡಿಲ್ಲ: ಸುಪ್ರೀಂ ಕೋರ್ಟ್ ಸ್ಪಷ್ಟನೆ

ಜನತಾ ಪ್ರಾತಿನಿಧ್ಯ ಕಾಯ್ದೆ-1950ರ ಸೆಕ್ಷನ್ 28ರ ಪ್ರಕಾರ, ಚುನಾವಣಾ ಆಯೋಗದೊಂದಿಗೆ ಸಮಾಲೋಚನೆ ನಡೆಸಿ ಕೇಂದ್ರ ಸರ್ಕಾರ ಮತದಾರರ ನೋಂದಣಿ ನಿಯಮಗಳನ್ನು ರೂಪಿಸುವ ಮತ್ತು ತಿದ್ದುಪಡಿ ಮಾಡುವ ವ್ಯವಸ್ಥೆ ಇದೆ. ಅಂತಹ ಬದಲಾವಣೆಗಳನ್ನು ಸಂಸತ್ತಿನ ಮುಂದೆಯೂ ಮಂಡಿಸಬೇಕಾಗುತ್ತದೆ.

**ರಾಹುಲ್ ಗಾಂಧಿ ಆರೋಪ**

ಫಾರ್ಮ್-6 ವಿವಾದದ ಕುರಿತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ. ಫಾರ್ಮ್-6 ಅನ್ನು ಕಾನೂನುಬಾಹಿರವಾಗಿ ಹಾಗೂ ಏಕಪಕ್ಷೀಯವಾಗಿ ಬದಲಾಯಿಸಲಾಗಿದೆ ಎಂದು ಆರೋಪಿಸಿರುವ ಅವರು, ಇದನ್ನು ಪ್ರಜಾಪ್ರಭುತ್ವದ ಮೇಲಿನ ದಾಳಿ ಎಂದು ಬಣ್ಣಿಸಿದ್ದಾರೆ.

ಬದಲಾದ ಫಾರ್ಮ್-6ಕ್ಕೆ ತಾವು ಅನುಮೋದನೆ ನೀಡಿಲ್ಲ ಎಂಬ ಸುಪ್ರೀಂ ಕೋರ್ಟ್‌ನ ಸ್ಪಷ್ಟನೆಯ ಬೆನ್ನಲ್ಲೇ ರಾಹುಲ್ ಗಾಂಧಿ ಈ ಆರೋಪ ಮಾಡಿದ್ದು, ಈ ಕ್ರಮಕ್ಕೆ ಕಾರಣರಾದವರನ್ನು ಹೊಣೆಗಾರರನ್ನಾಗಿಸಬೇಕು ಎಂದು ಒತ್ತಾಯಿಸಿದ್ದಾರೆ.

ಆದರೆ ಫಾರ್ಮ್-6ರಲ್ಲಿ ಬದಲಾವಣೆ ಯಾರು ಮಾಡಿದರು, ಅದಕ್ಕೆ ಯಾವ ಕಾನೂನು ಅಥವಾ ಆಡಳಿತಾತ್ಮಕ ಆಧಾರವಿತ್ತು ಎಂಬ ವಿಚಾರ ಇನ್ನೂ ನ್ಯಾಯಾಂಗ ಪರಿಶೀಲನೆಯಲ್ಲಿದೆ. ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸಿದ ನಂತರವೇ ಈ ಕುರಿತು ಹೆಚ್ಚಿನ ಸ್ಪಷ್ಟತೆ ಹೊರಬರುವ ಸಾಧ್ಯತೆಯಿದೆ.

# ಸಣ್ಣ, ಅತಿ ಹಿಂದುಳಿದ ಸಮುದಾಯಗಳಿಗೆ ನ್ಯಾಯ ಒದಗಿಸಲು ಓಬಿಸಿ ಒಳ ಮೀಸಲಾತಿ ಜಾರಿಯಾಗಲಿ: ರಘು ಕೌಟಿಲ್ಯ

ಸರ್ಕಾರದ ಸೌಲಭ್ಯಗಳು ಹಾಗೂ ಮೀಸಲಾತಿಯ ಪ್ರಯೋಜನ ಎಷ್ಟರ ಮಟ್ಟಿಗೆ ತಲುಪಿವೆ ಎಂಬುದನ್ನು ನಿಖರ ಅಂಕಿ-ಅಂಶಗಳ ಆಧಾರದಲ್ಲಿ ಪರಿಶೀಲಿಸಬೇಕು ಎಂದು ಒತ್ತಾಯಿಸಿದರು.

ಓಬಿಸಿ ವರ್ಗದೊಳಗಿನ ಒಳ ಮೀಸಲಾತಿ ಕುರಿತು ಸಮಗ್ರ ಮತ್ತು ವೈಜ್ಞಾನಿಕ ಅಧ್ಯಯನ ನಡೆಸಿ, ನಿಜವಾಗಿಯೂ ಹಿಂದುಳಿದಿರುವ ಸಣ್ಣ ಸಮುದಾಯಗಳಿಗೆ ನ್ಯಾಯಯುತ ಅವಕಾಶ ದೊರೆಯುವಂತೆ ಸಂವಿಧಾನಬದ್ಧ ಕ್ರಮ ಕೈಗೊಳ್ಳಬೇಕು. ಮೀಸಲಾತಿ ಹಾಗೂ ಸರ್ಕಾರಿ ಸೌಲಭ್ಯಗಳಿಂದ ಯಾವ ಸಮುದಾಯಗಳಿಗೆ ಎಷ್ಟು ಪ್ರಯೋಜನ ದೊರೆತಿದೆ ಮತ್ತು ಯಾವ ಸಮುದಾಯಗಳು ಇನ್ನೂ ಅವಕಾಶಗಳಿಂದ ವಂಚಿತವಾಗಿವೆ ಎಂಬುದನ್ನು ಗುರುತಿಸಬೇಕು ಎಂದರು.

ಕೇವಲ ಘೋಷಣೆಗಳಿಂದ ಸಾಮಾಜಿಕ ನ್ಯಾಯ ಸಾಧಿಸಲು ಸಾಧ್ಯವಿಲ್ಲ. ಜನಸಂಖ್ಯೆ, ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಹಿಂದುಳಿತತೆ ಹಾಗೂ ವಾಸ್ತವಿಕ ಪರಿಸ್ಥಿತಿಯನ್ನು ಆಧರಿಸಿ ಪ್ರತಿಯೊಂದು ಹಿಂದುಳಿದ ಸಮುದಾಯಕ್ಕೂ ನ್ಯಾಯಯುತ ಅವಕಾಶ ಮತ್ತು ಪ್ರಾತಿನಿಧ್ಯ ದೊರೆಯುವ ವ್ಯವಸ್ಥೆ ರೂಪಿಸಬೇಕು ಎಂದು ಹೇಳಿದರು.

ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಸಣ್ಣ ಹಾಗೂ ಅತಿ ಹಿಂದುಳಿದ ಸಮುದಾಯಗಳ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ ಅಗತ್ಯ ಸಮೀಕ್ಷೆ, ಅಧ್ಯಯನ ಹಾಗೂ ಅಂಕಿ-ಅಂಶ ಸಂಗ್ರಹಕ್ಕೆ ಮುಂದಾಗಬೇಕು. ಸಂವಿಧಾನದ ಆಶಯಗಳಿಗೆ ಅನುಗುಣವಾಗಿ ಹಿಂದುಳಿದ ಪ್ರತಿಯೊಬ್ಬರಿಗೂ ಅವರ ಸ್ಥಿತಿಗತಿಗೆ ಅನುಗುಣವಾಗಿ ಅವಕಾಶ ಕಲ್ಪಿಸುವುದೇ ನಿಜವಾದ ಸಾಮಾಜಿಕ ನ್ಯಾಯ ಎಂದು ರಘು ಕೌಟಿಲ್ಯ ಪ್ರತಿಪಾದಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಓಬಿಸಿ ಮೋರ್ಚಾ ಅಧ್ಯಕ್ಷ ವಿಷ್ಣುವರ್ಧನ್ ರೆಡ್ಡಿ ದಿನ್ನಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಮಾಜಿ ಸಂಸದ ಬಿ.ವಿ. ನಾಯಕ, ಮಾಜಿ ವಿಧಾನ ಪರಿಷತ್ ಸದಸ್ಯ ಎನ್. ಶಂಕ್ರಪ್ಪ, ಕೆ.ಎಂ. ಪಾಟೀಲ್, ರಾಜಕುಮಾರ, ರಮಾನಂದ ಯಾದವ್, ಬಂಡೇಶ್ ಸೇರಿದಂತೆ ವಿವಿಧ ಮಂಡಲಗಳ ಅಧ್ಯಕ್ಷರು, ಪದಾಧಿಕಾರಿಗಳು, ಮಹಿಳಾ ಕಾರ್ಯಕರ್ತರು ಹಾಗೂ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

# ಖಿಖ ಕುರಿತು ಕಾಂಗ್ರೆಸ್ ಅಪಪ್ರಚಾರ; ಅಕ್ರಮ ಮತದಾರರ ವಿರುದ್ಧ ಹೋರಾಟ ಮುಂದುವರಿಯಲಿದೆ: ರಘು ಕೌಟಿಲ್ಯ

ಸಂದರ್ಭದಲ್ಲಿ ರಾಜ್ಯದ ಕೆಲವೆಡೆ ಸಮುದಾಯ ಭವನಗಳು, ಧಾರ್ಮಿಕ ಸ್ಥಳಗಳು ಹಾಗೂ ಇತರ ಕಡೆ ಸಾಮೂಹಿಕವಾಗಿ ಅರ್ಜಿಗಳನ್ನು ಭರ್ತಿ ಮಾಡಿಸಲಾಗಿದೆ ಎಂಬ ಆರೋಪಗಳು ಕೇಳಿಬಂದಿದ್ದವು. ಚಾಮರಾಜಪೇಟೆ, ರಾಮನಗರ, ಕುಣಿಗಲ್, ತೀರ್ಥಹಳ್ಳಿ ಸೇರಿದಂತೆ ವಿವಿಧೆಡೆ ನಿಯಮಬಾಹಿರವಾಗಿ ಅರ್ಜಿಗಳನ್ನು ಭರ್ತಿ ಮಾಡಿಸಲಾಗಿದೆ ಎಂಬ ಆರೋಪಗಳಿದ್ದರೂ ರಾಜ್ಯ ಸರ್ಕಾರ ಸೂಕ್ತ ಕ್ರಮ ಕೈಗೊಂಡಿಲ್ಲ ಎಂದು ರಘು ಕೌಟಿಲ್ಯ ಆರೋಪಿಸಿದರು.

ಹುಬ್ಬಳ್ಳಿಯಲ್ಲಿ ನಕಲಿ ಜನನ ಹಾಗೂ ವಾಸಸ್ಥಳ ಪ್ರಮಾಣಪತ್ರಗಳನ್ನು ಸೃಷ್ಟಿಸಿ ಹಣ ವಸೂಲಿ ಮಾಡಲಾಗುತ್ತಿದೆ ಎಂಬ ವರದಿಗಳೂ ಹೊರಬಂದಿದ್ದವು. ಇಂತಹ ಪ್ರಕರಣಗಳ ಬಗ್ಗೆ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕಿತ್ತು. ಆದರೆ ರಾಜ್ಯ ಸರ್ಕಾರ ಈ ವಿಷಯಗಳಲ್ಲಿ ಗಂಭೀರತೆ ತೋರಿಲ್ಲ ಎಂದು ದೂರಿದರು.

ಮತದಾರರ ಪಟ್ಟಿಯಲ್ಲಿ ಯಾವುದೇ ಭಾರತೀಯ ಅರ್ಹ ನಾಗರಿಕರ ಹೆಸರು ಅನ್ಯಾಯವಾಗಿ ಕೈಬಿಡಬಾರದು. ಅದೇ ವೇಳೆ ಮೃತಪಟ್ಟವರು, ಸ್ಥಳಾಂತರಗೊಂಡವರು, ನಕಲಿ ನೋಂದಣಿ ಹೊಂದಿರುವವರು ಹಾಗೂ ಮತದಾರರಾಗಲು ಕಾನೂನುಬದ್ಧ ಅರ್ಹತೆ ಇಲ್ಲದವರ ಹೆಸರು ಪಟ್ಟಿಯಲ್ಲಿ ಉಳಿಯಬಾರದು. ಪಾರದರ್ಶಕ ಮತ್ತು ನಿಖರ ಮತದಾರರ ಪಟ್ಟಿ ಪ್ರಜಾಪ್ರಭುತ್ವದ ಮೂಲಭೂತ ಅಗತ್ಯವಾಗಿದೆ ಎಂದರು.

ಚುನಾವಣಾ ಆಯೋಗವು ಸಂವಿಧಾನ ಮತ್ತು ಜನಪ್ರತಿನಿಧಿ ಕಾಯ್ದೆಯಡಿ ಮತದಾರರ ಪಟ್ಟಿಯ ಪರಿಷ್ಕರಣೆ ನಡೆಸುತ್ತಿದೆ. ಈ ಪ್ರಕ್ರಿಯೆಯನ್ನು ರಾಜಕೀಯ ದೃಷ್ಟಿಯಿಂದ ನೋಡುವ ಬದಲು ಅರ್ಹ ಮತದಾರರಿಗೆ ಮತದಾನದ ಹಕ್ಕು ಖಾತ್ರಿಪಡಿಸುವ ಹಾಗೂ ಅನರ್ಹ ಹೆಸರುಗಳನ್ನು ತೆರವುಗೊಳಿಸುವ ಪ್ರಕ್ರಿಯೆಯಾಗಿ ನೋಡಬೇಕು ಎಂದು ಹೇಳಿದರು.

ಚುನಾವಣಾ ಆಯೋಗದ ಕಾರ್ಯವೈಖರಿ ಕುರಿತು ಕಾಂಗ್ರೆಸ್ ಈಗ ಪ್ರಶ್ನೆಗಳನ್ನು ಎತ್ತುತ್ತಿದೆ. ಆದರೆ ಹಿಂದೆ ಕಾಂಗ್ರೆಸ್ ನೇತೃತ್ವದ ಸರ್ಕಾರಗಳ ಅವಧಿಯಲ್ಲಿಯೂ ಮತದಾರರ ಪಟ್ಟಿಯ ಪರಿಷ್ಕರಣೆಗಳು ನಡೆದಿವೆ. ಸಾಂವಿಧಾನಿಕ ಸಂಸ್ಥೆಗಳ ಸ್ವಾಯತ್ತತೆ ಕುರಿತು ಮಾತನಾಡುವ ಕಾಂಗ್ರೆಸ್ ತನ್ನ ಹಿಂದಿನ ಆಡಳಿತಾವಧಿಯ ನಡೆಗಳನ್ನೂ ಅವಲೋಕಿಸಿಕೊಳ್ಳಬೇಕು ಎಂದು ಟೀಕಿಸಿದರು.

SIR ಹೆಸರಿನಲ್ಲಿ ಯಾವುದೇ ಅರ್ಹ ಮತದಾರರಿಗೆ ಅನ್ಯಾಯವಾಗಬಾರದು ಎಂಬುದರ ಜೊತೆಗೆ ನಕಲಿ ಮತ್ತು ಅಕ್ರಮ ನೋಂದಣಿಗೂ ಅವಕಾಶ ನೀಡಬಾರದು. ಕಾನೂನುಬದ್ಧ ಮತದಾರರ ಹಕ್ಕುಗಳ ರಕ್ಷಣೆಗಾಗಿ ಬಿಜೆಪಿ ಬದ್ಧವಾಗಿದ್ದು, ಮತದಾರರ ಪಟ್ಟಿಯ ಶುದ್ಧೀಕರಣಕ್ಕೆ ಸಂಬಂಧಿಸಿದ ಹೋರಾಟವನ್ನು ಸಂವಿಧಾನದ ಚೌಕಟ್ಟಿನಲ್ಲಿಯೇ ಮುಂದುವರಿಸಲಿದೆ ಎಂದು ರಘು ಕೌಟಿಲ್ಯ ತಿಳಿಸಿದರು.

ಈ ಸಂದರ್ಭದಲ್ಲಿ ಒಬಿಸಿ ಮೋರ್ಚಾ ಜಿಲ್ಲಾಧ್ಯಕ್ಷ ವಿಷ್ಣುವರ್ಧನ್ ರೆಡ್ಡಿ ದಿನ್ನಿ, ಜಿಲ್ಲಾ ವಕ್ತಾರ ಸಿದ್ದನಗೌಡ ನೆಲಹಾಳ್, ನರಸಪ್ಪ ಯಾಕ್ಲಾಸಪುರ, ವೆಂಕಟೇಶ್ ಉಪ್ಪಾರ, ಬಸವರಾಜ್ ಉಪಸ್ಥಿತರಿದ್ದರು.

# ಅ.09 ರಿಂದ ಕುಕನೂರು ಮಾರುಕಟ್ಟೆಯಲ್ಲಿ ವಾರಕ್ಕೆ ಎರಡು ದಿನ ಇ-ಟೆಂಡರ್

ಕೊಪ್ಪಳ, ಅ. 05, (ಕರ್ನಾಟಕ ವಾರ್ತೆ): ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಯಲಬುರ್ಗಾದ ಕುಕನೂರು ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ಅಧಿಸೂಚಿತ ಕೃಷಿ ಉತ್ಪನ್ನಗಳ ಇ-ಟೆಂಡರ್ ಪ್ರಕ್ರಿಯೆ ಅಕ್ಟೋಬರ್ 09 ರಿಂದ ನಡೆಯಲಿದೆ.

ಸರ್ಕಾರಿ ರಜೆ ದಿನಗಳನ್ನು ಹೊರತುಪಡಿಸಿ ಪ್ರತಿ ಸೋಮವಾರ ಮತ್ತು ಶುಕ್ರವಾರ, ವಾರದಲ್ಲಿ ಎರಡು ದಿನ ಇ-ಟೆಂಡರ್ ನಡೆಯಲಿದೆ. ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 12.30 ರವರೆಗೆ ಲಾಟ್ ಎಂಟ್ರಿ, 12.30ರಿಂದ 1.30ರವರೆಗೆ ಟೆಂಡರ್ ದರ ಸಲ್ಲಿಕೆ ನಡೆಯಲಿದ್ದು, ಮಧ್ಯಾಹ್ನ 1.30ರ ನಂತರ ಟೆಂಡರ್ ತೆರೆಯುವ ಹಾಗೂ ದರ ಘೋಷಿಸುವ ಪ್ರಕ್ರಿಯೆ ನಡೆಯಲಿದೆ.

ರೈತರು ತಮ್ಮ ಅಧಿಸೂಚಿತ ಕೃಷಿ ಉತ್ಪನ್ನಗಳನ್ನು ಕುಕನೂರು ಮುಖ್ಯ ಮಾರುಕಟ್ಟೆ ಪ್ರಾಂಗಣಕ್ಕೆ ತಂದು ಇ-ಟೆಂಡರ್ ಮೂಲಕ ಮಾರಾಟ ಮಾಡುವುದರಿಂದ ಸ್ಪರ್ಧಾತ್ಮಕ ಬೆಲೆ ಪಡೆಯಲು ಸಾಧ್ಯವಾಗಲಿದೆ. ಆದ್ದರಿಂದ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಮಾರುಕಟ್ಟೆಗೆ ಉತ್ಪನ್ನಗಳನ್ನು ತಂದು ಮಾರಾಟ ಮಾಡುವಂತೆ ಸಮಿತಿ ಮನವಿ ಮಾಡಿದೆ.

ಸಮಿತಿಯಿಂದ ಲೈಸನ್ಸ್ ಪಡೆದ ದಲಾಲರು ಹಾಗೂ ಕೃಷಿ ಮಾರಾಟ ಇಲಾಖೆಯಿಂದ ಲೈಸನ್ ಹೊಂದಿರುವ ಖರೀದಿದಾರರು ಇ-ಟೆಂಡರ್‌ನಲ್ಲಿ ಭಾಗವಹಿಸಿ ಪ್ರಕ್ರಿಯೆಯನ್ನು ಯಶಸ್ವಿಗೊಳಿಸಲು ಸಹಕರಿಸುವಂತೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಯಲಬುರ್ಗಾ ಕೇಂದ್ರ ಕಚೇರಿ ಕುಕನೂರಿನ ಕಾರ್ಯದರ್ಶಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತೋಟದೊಡ್ಡಿ ಮನೆಗಳಿಗೆ ಸಿಂಗಲ್ ಫೇಸ್ ವಿದ್ಯುತ್ ಕಲ್ಪಿಸಲು ರೈತ ಸಂಘ ಆಗ್ರಹ



ಹಟ್ಟಿ ಚಿನ್ನದ ಗಣಿ: ಗುರುಗುಂಟಾ ವ್ಯಾಪ್ತಿಯ ತೋಟದೊಡ್ಡಿಗಳಲ್ಲಿರುವ ಮನೆಗಳಿಗೆ ಸಿಂಗಲ್ ಫೇಸ್ ವಿದ್ಯುತ್ ಸಂಪರ್ಕ ಕಲ್ಪಿಸಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಜೆಸ್ಕಾಂ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಗುರುಗುಂಟಾ ಭಾಗದ ತೋಟದೊಡ್ಡಿಗಳಲ್ಲಿ ವಾಸಿಸುತ್ತಿರುವ ಬಡ ಹಾಗೂ ಹಿಂದುಳಿದ ವರ್ಗಗಳ ಹಲವು ಕುಟುಂಬಗಳಿಗೆ ಸಮರ್ಪಕ ವಿದ್ಯುತ್ ಸೌಲಭ್ಯ ಇಲ್ಲದ ಕಾರಣ ರಾತ್ರಿ ವೇಳೆ ಕತ್ತಲಲ್ಲೇ ಕಾಲ ಕಳೆಯುವಂತಾಗಿದೆ. ಇದರಿಂದ ವಿದ್ಯಾರ್ಥಿಗಳ ಶಿಕ್ಷಣಕ್ಕೂ ತೀವ್ರ ತೊಂದರೆಯಾಗುತ್ತಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಪ್ರಸ್ತುತ ಶಾಲೆ-ಕಾಲೇಜು ವಿದ್ಯಾರ್ಥಿಗಳಿಗೆ ಅರ್ಧವಾರ್ಷಿಕ ಪರೀಕ್ಷೆಗಳು ನಡೆಯುತ್ತಿದ್ದು, ವಿದ್ಯುತ್ ಇಲ್ಲದಿರುವುದರಿಂದ ರಾತ್ರಿ ವೇಳೆ ಓದಲು ಹಾಗೂ ಪರೀಕ್ಷೆಗೆ ಸಿದ್ಧತೆ ಮಾಡಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಈಗಾಗಲೇ ಹಲವು ಮೂಲಸೌಲಭ್ಯಗಳ ಕೊರತೆಯ ನಡುವೆ ಗ್ರಾಮೀಣ ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದು, ವಿದ್ಯುತ್ ಸಮಸ್ಯೆಯಿಂದ ಅವರ ಶೈಕ್ಷಣಿಕ ಪ್ರಗತಿಗೆ ಮತ್ತಷ್ಟು ಹಿನ್ನಡೆಯಾಗುತ್ತಿದೆ ಎಂದು ಸಂಘದ ಪದಾಧಿಕಾರಿಗಳು ದೂರಿದರು.

ಪಟ್ಟಣ ಪ್ರದೇಶದ ವಿದ್ಯಾರ್ಥಿಗಳಿಗೆ ದೊರೆಯುವ ಶೈಕ್ಷಣಿಕ ವಾತಾವರಣ ಹಾಗೂ ಮೂಲಸೌಲಭ್ಯಗಳು ತೋಟದೊಡ್ಡಿಗಳ ವಿದ್ಯಾರ್ಥಿಗಳಿಗೆ ದೊರೆಯುತ್ತಿಲ್ಲ. ಇದರಿಂದ ಸ್ಪರ್ಧಾತ್ಮಕ ಪರೀಕ್ಷೆಗಳು ಸೇರಿದಂತೆ ವಿವಿಧ ಶೈಕ್ಷಣಿಕ ಚಟುವಟಿಕೆಗಳಲ್ಲಿ ಇತರ ವಿದ್ಯಾರ್ಥಿಗಳೊಂದಿಗೆ ಸ್ಪರ್ಧಿಸಲು ತೊಂದರೆಯಾಗುತ್ತಿದೆ ಎಂದು ಹೇಳಿದರು.

ವಿದ್ಯುತ್ ಇಲ್ಲದಿರುವುದರಿಂದ ರಾತ್ರಿ ವೇಳೆ ಗ್ರಾಮಸ್ಥರ ಸುರಕ್ಷತೆಗೂ ಸಮಸ್ಯೆಯಾಗುತ್ತಿದೆ. ತೋಟದೊಡ್ಡಿಗಳ ಸುತ್ತಮುತ್ತ ಹಾವು, ಚೇಳು ಸೇರಿದಂತೆ ವಿಷಜಂತುಗಳ ಹಾವಳಿ ಇದ್ದು, ಕತ್ತಲಿನಲ್ಲಿ ಸಂಚರಿಸುವುದು ಅಪಾಯಕಾರಿಯಾಗಿದೆ. ಯಾವುದೇ ಅನಾಹುತ ಸಂಭವಿಸುವ ಮುನ್ನ ಸಂಬಂಧಪಟ್ಟ ಇಲಾಖೆ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಆಗ್ರಹಿಸಿದರು.

ಗುರುಗುಂಟಾ ವ್ಯಾಪ್ತಿಯ ತೋಟದೊಡ್ಡಿ ಮನೆಗಳಿಗೆ ತಕ್ಷಣ ಸಿಂಗಲ್ ಫೇಸ್ ವಿದ್ಯುತ್ ಸಂಪರ್ಕ ಕಲ್ಪಿಸಿ ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರಿಗೆ ಅನುಕೂಲ ಮಾಡಿಕೊಡಬೇಕು. ಎರಡು ದಿನಗಳೊಳಗೆ ಸಮಸ್ಯೆ ಪರಿಹರಿಸದಿದ್ದರೆ ಗುರುಗುಂಟಾ ವಿದ್ಯುತ್ ಉಪಕೇಂದ್ರದ ಬಳಿ ವಿವಿಧ ಗ್ರಾಮಗಳ ಕುಟುಂಬಸ್ಥರೊಂದಿಗೆ ಪ್ರತಿಭಟನೆ ಹಾಗೂ ಧರಣಿ ಹಮ್ಮಿಕೊಳ್ಳಲಾಗುವುದು ಎಂದು ಮನವಿಯಲ್ಲಿ ಎಚ್ಚರಿಸಲಾಗಿದೆ.

ಈ ಸಂದರ್ಭದಲ್ಲಿ ರೈತ ಸಂಘದ ತಾಲೂಕು ಅಧ್ಯಕ್ಷ ದುರ್ಗಾ ಪ್ರಸಾದ, ಕಾರ್ಯದರ್ಶಿ ಬಸವರಾಜ ಅಂಗಡಿ, ವಿಜಯಕುಮಾರ್, ಮಹ್ಮದ್ ಸಾಬ್, ರಾಮಣ್ಣ ಗೌಡ, ನಾಗಪ್ಪ, ಹುಲುಗಪ್ಪ, ಮಲ್ಲೇಶ್, ಚಂದ್ರಶೇಖರ್, ದುರುಗಪ್ಪ ಗೌಡ, ಶಿವಕುಮಾರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## 6 ತಾಸು ವಿದ್ಯುತ್ ಪೂರೈಕೆಗೆ ಆಗ್ರಹಿಸಿ ನಾಗಲಾಪೂರ ವಿದ್ಯುತ್ ಕೇಂದ್ರಕ್ಕೆ ರೈತರ ಬೀಗ



ಲಿಂಗಸಗೂರು: ಬರಗಾಲದ ಪರಿಸ್ಥಿತಿಯಲ್ಲಿ ಬೆಳೆಗಳಿಗೆ ನೀರುಣಿಸಲು ಸಮರ್ಪಕ ವಿದ್ಯುತ್ ಪೂರೈಕೆಯಾಗುತ್ತಿಲ್ಲ ಎಂದು ಆರೋಪಿಸಿ ತಾಲೂಕಿನ ಪಿಕಳಿಹಾಳ, ಕನ್ನಾಳ, ವ್ಯಾಸನಂದಿಹಾಳ, ನಾಗಲಾಪೂರ, ಉಳಿಮೇಶ್ವರ ಹಾಗೂ ಹಡಗಲಿ ಗ್ರಾಮಗಳ ರೈತರು ನಾಗಲಾಪೂರ ಶಾಖೆಯ ವಿದ್ಯುತ್ ಕೇಂದ್ರದ ಮುಖ್ಯ ದ್ವಾರಕ್ಕೆ ಬೀಗ ಜಡಿದು ಪ್ರತಿಭಟನೆ ನಡೆಸಿದರು.

ಮಳೆಯ ಕೊರತೆಯಿಂದ ಈಗಾಗಲೇ ಬೆಳೆಗಳು ಒಣಗುವ ಸ್ಥಿತಿಗೆ ತಲುಪಿದ್ದು, ಲಭ್ಯವಿರುವ ನೀರನ್ನು ಬಳಸಿಕೊಂಡು ಬೆಳೆ ಉಳಿಸಿಕೊಳ್ಳಲು ರೈತರು ಹರಸಾಹಸ ಪಡುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಕೃಷಿ ಪಂಪ್‌ಸೆಟ್‌ಗಳಿಗೆ ನಿಗದಿತ ಸಮಯದಲ್ಲಿ ವಿದ್ಯುತ್ ಪೂರೈಕೆ ಮಾಡದೆ ಅಧಿಕಾರಿಗಳು ನಿರ್ಲಕ್ಷ್ಯ ವಹಿಸುತ್ತಿದ್ದಾರೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ರಾತ್ರಿ ವೇಳೆ ನೀಡಲಾಗುತ್ತಿರುವ ಆರು ತಾಸಿನ ವಿದ್ಯುತ್‌ನ್ನು ಹಗಲು ಹೊತ್ತಿನಲ್ಲಿಯೇ ನಿರಂತರವಾಗಿ ಪೂರೈಸಬೇಕು. ಇದರಿಂದ ರೈತರು ಸುರಕ್ಷಿತವಾಗಿ ಹೊಲಗಳಿಗೆ ನೀರು ಹಾಯಿಸಿ ಬೆಳೆಗಳನ್ನು ಉಳಿಸಿಕೊಳ್ಳಲು ಅನುಕೂಲವಾಗಲಿದೆ ಎಂದು ಒತ್ತಾಯಿಸಿದರು.

"ರಾತ್ರಿ 11 ಗಂಟೆಗೆ ವಿದ್ಯುತ್ ನೀಡಿ 12.30ಕ್ಕೆ ಸ್ಥಗಿತಗೊಳಿಸಿದರೆ ಒಂದೂವರೆ ತಾಸಿನಲ್ಲಿ ಬೆಳೆಗಳಿಗೆ ಸಮರ್ಪಕವಾಗಿ ನೀರು ಹಾಯಿಸಲು ಹೇಗೆ ಸಾಧ್ಯ? ರಾತ್ರಿ ವಿದ್ಯುತ್ ನೀಡಿದರೂ ಹಗಲು ಹೊತ್ತಿನಲ್ಲಿ ಕಡ್ಡಾಯವಾಗಿ ಆರು ತಾಸು ನಿರಂತರ ವಿದ್ಯುತ್ ಪೂರೈಸಬೇಕು'' ಎಂದು ರೈತರು ಆಗ್ರಹಿಸಿದರು.

ರಾತ್ರಿ ವೇಳೆ ಹೊಲಗಳಿಗೆ ತೆರಳಿ ನೀರು ಹಾಯಿಸುವಾಗ ಹಾವು, ಚೇಳು ಸೇರಿದಂತೆ ವಿಷಜಂತುಗಳ ಅಪಾಯ ಎದುರಾಗುತ್ತದೆ. ಇದರಿಂದ ರೈತರ ಜೀವಕ್ಕೂ ಅಪಾಯವಿದ್ದು, ಕೃಷಿ ಚಟುವಟಿಕೆಗಳಿಗೆ ಹಗಲು ಹೊತ್ತಿನ ವಿದ್ಯುತ್ ಪೂರೈಕೆಯೇ ಸೂಕ್ತವಾಗಿದೆ ಎಂದು ಪ್ರತಿಭಟನಾಕಾರರು ತಿಳಿಸಿದರು.

ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ರೈತರ ಸಮಸ್ಯೆ ಆಲಿಸಿ ತಕ್ಷಣ ಪರಿಹಾರ ಕಲ್ಪಿಸಬೇಕು. ಬೇಡಿಕೆಗೆ ಸ್ಪಂದಿಸದೆ ನಿರ್ಲಕ್ಷ್ಯ ವಹಿಸಿದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದ ರೈತರು, ವಿದ್ಯುತ್ ಇಲಾಖೆಯ ವಿರುದ್ಧ ಘೋಷಣೆಗಳನ್ನು ಕೂಗಿದರು.

ಪ್ರತಿಭಟನೆಯಲ್ಲಿ ಸಿದ್ದಲಿಂಗಯ್ಯ ಹಿರೇಮಠ ಪಿಕಳಿಹಾಳ, ಗಂಗಪ್ಪ ಕನ್ನಾಳ, ಬಸವರಾಜ ಕನ್ನಾಳ, ಪಿಡ್ಡಪ್ಪ ಪಿಕಳಿಹಾಳ, ಬಸವರಾಜ ಪಿಕಳಿಹಾಳ, ಹನುಮಂತ ಉಳಿಮೇಶ್ವರ, ಪರಸಪ್ಪ ಬಾಗಾಪೂರ ಪಿಕಳಿಹಾಳ, ಶಿವಪ್ಪ ಮಂಕಣಿ, ಶರಣಪ್ಪ ಅಡವಿಭಾವಿ ಸೇರಿದಂತೆ ವಿವಿಧ ಗ್ರಾಮಗಳ ರೈತರು ಭಾಗವಹಿಸಿದ್ದರು.

## ಹೃದಯದ ಆರೋಗ್ಯ ಕಾಪಾಡಲು ಜೀವನಶೈಲಿ ಬದಲಾವಣೆ ಅಗತ್ಯ: ಡಾ. ರುದ್ರಮುನಿ




ಲಿಂಗಸುಗೂರು: ಆರೋಗ್ಯ ಇಲಾಖೆ ಸಾರ್ವಜನಿಕರ ಆರೋಗ್ಯದ ಬಗ್ಗೆ ಕಾಳಜಿ ವಹಿಸುವಂತೆಯೇ ಪ್ರತಿಯೊಬ್ಬರೂ ತಮ್ಮ ಹಾಗೂ ತಮ್ಮ ಪ್ರೀತಿಪಾತ್ರರ ಹೃದಯದ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಸಾರ್ವಜನಿಕ ಆಸ್ಪತ್ರೆಯ ಎಆರ್‌ಟಿ ವಿಭಾಗದ ವೈದ್ಯಾಧಿಕಾರಿ ಡಾ. ರುದ್ರಮುನಿ ಹೇಳಿದರು.

ಪಟ್ಟಣದ ಸಾರ್ವಜನಿಕ ಆಸ್ಪತ್ರೆಯ ಎನ್‌ಸಿಡಿ ವಿಭಾಗದ ವತಿಯಿಂದ ಹಮ್ಮಿಕೊಂಡಿದ್ದ ವಿಶ್ವ ಹೃದಯ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹೃದಯ ಸಂಬಂಧಿ ಕಾಯಿಲೆಗಳು, ಪಾರ್ಶ್ವವಾಯು ಸೇರಿದಂತೆ ಗಂಭೀರ ಆರೋಗ್ಯ ಸಮಸ್ಯೆಗಳನ್ನು ತಡೆಗಟ್ಟಲು ಆರೋಗ್ಯಕರ ಜೀವನಶೈಲಿ ಅಳವಡಿಸಿಕೊಳ್ಳುವುದು ಅತ್ಯಂತ ಮುಖ್ಯ ಎಂದರು.

ಹೃದಯ ಸಂಬಂಧಿ ಸಮಸ್ಯೆಗಳು ಕೆಲವೊಮ್ಮೆ ಸ್ಪಷ್ಟ ಲಕ್ಷಣಗಳಿಲ್ಲದೆ ಬೆಳೆಯಬಹುದು. ಹೃದಯ ಬಡಿತದಲ್ಲಿನ ಅಸಹಜತೆ ಸೇರಿದಂತೆ ದೇಹ ನೀಡುವ ಎಚ್ಚರಿಕೆಯ ಸಂಕೇತಗಳನ್ನು ನಿರ್ಲಕ್ಷಿಸಬಾರದು. ನಿಯಮಿತ ಆರೋಗ್ಯ ತಪಾಸಣೆಗೆ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಧೂಮಪಾನ, ತಂಬಾಕು ಹಾಗೂ ನಶ್ಯ ಸೇವನೆಯಿಂದ ದೂರವಿರಬೇಕು. ಮದ್ಯಪಾನ ತ್ಯಜಿಸುವುದರ ಜೊತೆಗೆ ಸ್ವಚ್ಛತೆ, ಸಮತೋಲಿತ ಆಹಾರ, ದೈಹಿಕ ಚಟುವಟಿಕೆ ಹಾಗೂ ಆರೋಗ್ಯಕರ ಜೀವನಶೈಲಿಯನ್ನು ರೂಢಿಸಿಕೊಳ್ಳಬೇಕು. ದುಶ್ಚಟಗಳಿಂದ ಹೃದಯ ಸಂಬಂಧಿ ಸಮಸ್ಯೆಗಳಷ್ಟೇ ಅಲ್ಲದೆ ಕ್ಯಾನ್ಸರ್ ಸೇರಿದಂತೆ ಹಲವು ಗಂಭೀರ ಕಾಯಿಲೆಗಳ ಅಪಾಯವೂ ಹೆಚ್ಚಾಗುತ್ತದೆ ಎಂದು ತಿಳಿಸಿದರು.

ಯುವ ವಯಸ್ಸಿನಲ್ಲಿಯೇ ಅನಾರೋಗ್ಯಕ್ಕೆ ತುತ್ತಾಗುವುದನ್ನು ತಪ್ಪಿಸಲು ಆಹಾರ ಪದ್ಧತಿ ಮತ್ತು ದೈನಂದಿನ ಜೀವನಶೈಲಿಯಲ್ಲಿ ಅಗತ್ಯ ಬದಲಾವಣೆ ಮಾಡಿಕೊಳ್ಳಬೇಕು. ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ವಹಿಸದೆ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸುವ ಮೂಲಕ ಹೃದಯವನ್ನು ಆರೋಗ್ಯವಾಗಿಟ್ಟುಕೊಳ್ಳಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಮುಖ್ಯ ಆಡಳಿತ ವೈದ್ಯಾಧಿಕಾರಿ ಡಾ. ರುದ್ರಗೌಡ ಪಾಟೀಲ್, ಡಾ. ಅಮೀನ್, ಡಾ. ನೀಲಕಂಠ, ಡಾ. ಪ್ರಗತಿ, ಎನ್‌ಸಿಡಿ ತಂಡದ ಚಂದ್ರಕಲಾ, ನೀಲಾಂಬಿಕೆ, ಶಾಂತಮ್ಮ, ಅಮರೇಶ್, ರಾಜಶೇಖರ್, ಆಸ್ಪತ್ರೆಯ ಸಿಬ್ಬಂದಿ ಹಾಗೂ ನರ್ಸಿಂಗ್ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಎಚ್‌ಐವಿ ಸೋಂಕು ಹರಡದಿರಲಿಬಾಳು ಬಂಗಾರವಾಗಲಿ: ವಿದ್ಯಾರ್ಥಿನಿಯರಿಂದ ಫ್ಲ್ಯಾಶ್ ಮಾಬ್, ಬೀದಿ ನಾಟಕ




ರಾಯಚೂರು: ಎಚ್‌ಐವಿಏಡ್ಸ್ ಕುರಿತು ಸಾರ್ವಜನಿಕರಲ್ಲಿ, ವಿಶೇಷವಾಗಿ ಯುವ ಸಮುದಾಯದಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಹಾಗೂ ರೆಡ್ ರಿಬ್ಬನ್ ಕ್ಲಬ್ (ಆರ್‌ಆರ್‌ಸಿ) ಘಟಕಗಳ ವತಿಯಿಂದ ನಗರದ ವಿವಿಧೆಡೆ ಫ್ಲ್ಯಾಶ್ ಮಾಬ್ ಮತ್ತು ಬೀದಿ ನಾಟಕ ಪ್ರದರ್ಶನ ನಡೆಸಲಾಯಿತು.

ಎಚ್‌ಐವಿ ಸೋಂಕು ಹರಡದಿರಲಿಬಾಳು ಬಂಗಾರವಾಗಲಿ ಎಂಬ ಘೋಷವಾಕ್ಯದಡಿ ಹಮ್ಮಿಕೊಂಡಿದ್ದ ಕಾರ್ಯಕ್ರಮಕ್ಕೆ ಡೊಳ್ಳು ಬಾರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದ ಕಾಲೇಜಿನ ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಡಾ. ಸಂತೋಷಕುಮಾರ ರೇವೂರ, ಎನ್‌ಎಸ್‌ಎಸ್ ಹಾಗೂ ರೆಡ್ ರಿಬ್ಬನ್ ಕ್ಲಬ್ ಘಟಕಗಳು ಪ್ರತಿ ಶೈಕ್ಷಣಿಕ ವರ್ಷದುದ್ದಕ್ಕೂ ಎಚ್‌ಐವಿಏಡ್ಸ್, ಕ್ಷಯರೋಗ (ಟಿಬಿ) ಹಾಗೂ ಸ್ವಯಂಪ್ರೇರಿತ ರಕ್ತದಾನದ ಕುರಿತು ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿವೆ ಎಂದರು.

ಸಾರ್ವಜನಿಕರಿಗೆ ಆರೋಗ್ಯ ಸಂಬಂಧಿತ ಮಾಹಿತಿಯನ್ನು ಸರಳ ಮತ್ತು ಪರಿಣಾಮಕಾರಿಯಾಗಿ ತಲುಪಿಸುವಲ್ಲಿ ಬೀದಿ ನಾಟಕ ಹಾಗೂ ಫ್ಲ್ಯಾಶ್ ಮಾಬ್‌ಗಳು ಮಹತ್ವದ ಪಾತ್ರ ವಹಿಸುತ್ತವೆ. ಸ್ವಯಂಸೇವಕಿಯರು ತಮ್ಮ ಪ್ರದರ್ಶನದ ಮೂಲಕ ಎಚ್‌ಐವಿ ಸೋಂಕಿನ ಕುರಿತು ಸಮಾಜದಲ್ಲಿರುವ ತಪ್ಪು ಕಲ್ಪನೆಗಳನ್ನು ದೂರಮಾಡಿ, ಯುವಜನರಲ್ಲಿ ಅರಿವು ಮೂಡಿಸಬೇಕು ಎಂದು ಕರೆ ನೀಡಿದರು.

ನಗರದ ಕೇಂದ್ರ ಬಸ್ ನಿಲ್ದಾಣ, ಕಾಟಿ ದರ್ವಾಜಾ, ತೀನ್ ಕಂದೀಲು ವೃತ್ತ, ಉಸ್ಮಾನಿಯಾ ತರಕಾರಿ ಮಾರುಕಟ್ಟೆ, ಮಹಾವೀರ ವೃತ್ತ, ಭವಾನಿ ವೃತ್ತ ಹಾಗೂ ಭಂಗಿಕುಂಟಾ ಸೇರಿದಂತೆ ಜನನಿಬಿಡ ಸಾರ್ವಜನಿಕ ಸ್ಥಳಗಳಲ್ಲಿ ವಿದ್ಯಾರ್ಥಿನಿಯರು ಫ್ಲ್ಯಾಶ್ ಮಾಬ್ ಮತ್ತು ಬೀದಿ ನಾಟಕ ಪ್ರದರ್ಶಿಸಿ ಸಾರ್ವಜನಿಕರ ಗಮನ ಸೆಳೆದರು.

ಎಚ್‌ಐವಿ ಸೋಂಕು ಹರಡುವ ವಿಧಾನಗಳು, ಸೋಂಕು ತಡೆಗಟ್ಟುವ ಮುನ್ನೆಚ್ಚರಿಕೆ ಕ್ರಮಗಳು, ಪರೀಕ್ಷೆ ಮತ್ತು ಲಭ್ಯವಿರುವ ಚಿಕಿತ್ಸಾ ಸೌಲಭ್ಯಗಳು, ಸೋಂಕಿತರಿಗಾಗಿ ಇರುವ ಸರ್ಕಾರಿ ಸೌಲಭ್ಯಗಳು ಹಾಗೂ ಎಚ್‌ಐವಿಏಡ್ಸ್ (ತಡೆ ಮತ್ತು ನಿಯಂತ್ರಣ) ಕಾಯ್ದೆ2017ರಡಿ ದೊರೆಯುವ ರಕ್ಷಣೆಯ ಕುರಿತು ನಾಟಕ ಮತ್ತು ಜಾಗೃತಿ ಸಂದೇಶಗಳ ಮೂಲಕ ಮಾಹಿತಿ ನೀಡಲಾಯಿತು.

ಸ್ವಯಂಸೇವಕಿಯರಾದ ಭವಾನಿ, ಲಕ್ಷ್ಮೀ, ಸ್ವಪ್ನಾ ಹಾಗೂ ರೇಣುಕಾ ಡೊಳ್ಳು ವಾದ್ಯದಲ್ಲಿ ಭಾಗವಹಿಸಿದರೆ, ಸುಷ್ಮಾ, ಅನ್ನಪೂರ್ಣ, ಸಂಗೀತಾ ವೆಂಕಟೇಶ, ಜಮುನಾ, ಜಮುಲಮ್ಮ, ಮಹೇಶ್ವರಿ ಬಿ., ರೇಖಾ, ಜಯಶ್ರೀ, ತೇಜೇಶ್ವರಿ, ಅಂಬಿಕಾ, ರೂಪಾ, ತುಳಸಿ, ಅಂಬುಜಾ, ಸಂಗೀತಾ ವಿರೂಪಾಕ್ಷಿ ಸೇರಿದಂತೆ ವಿದ್ಯಾರ್ಥಿನಿಯರು ಪಾತ್ರಾಭಿನಯ ಮತ್ತು ಹಾಡುಗಾರಿಕೆಯ ಮೂಲಕ ಜಾಗೃತಿ ಮೂಡಿಸಿದರು.

ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಡಾ. ಸಂತೋಷಕುಮಾರ ರೇವೂರ ಕಾರ್ಯಕ್ರಮದುದ್ದಕ್ಕೂ ಉಪಸ್ಥಿತರಿದ್ದು ವಿದ್ಯಾರ್ಥಿನಿಯರ ತಂಡಕ್ಕೆ ಮಾರ್ಗದರ್ಶನ ನೀಡಿದರು.

## ಮುಂಗಾರು ಹಂಗಾಮಿನಲ್ಲಿ ಬೆಂಬಲ ಬೆಲೆ ಯೋಜನೆಯಡಿ ಹೆಸರುಕಾಳು ಖರೀದಿ: ನೋಂದಣಿ ಕೇಂದ್ರ ಆರಂಭ

ಕೊಪ್ಪಳ, ಅ. 05, (ಕರ್ನಾಟಕ ವಾರ್ತೆ): 2026-27ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರ ನಿಗದಿಪಡಿಸಿರುವ ಬೆಂಬಲ ಬೆಲೆ ದರ ಪ್ರತಿ ಕ್ವಿಂಟಾಲ್ ಗೆ ರೂ.8,780/- ರಂತೆ ಗರಿಷ್ಠ 38,250 ಮೆಟ್ರಿಕ್ ಟನ್ ಎಫ್.ಎ.ಕ್ಯೂ ಗುಣಮಟ್ಟದ ಹೆಸರುಕಾಳನ್ನು ಬೆಂಬಲ ಬೆಲೆ ಮಾರ್ಗಸೂಚಿಯನ್ವಯ ಜಿಲ್ಲೆಯ ರೈತರಿಂದ ಖರೀದಿಸುವ ಕುರಿತು ಅಕ್ಟೋಬರ್ 3 ರಂದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯಲ್ಲಿ ನಿರ್ಧರಿಸಲಾಗಿದ್ದು, ಹೆಸರು ಕಾಳು ಖರೀದಿಗೆ ನೋಂದಣಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ.

ಕುಕನೂರು ಖರೀದಿ ಕೇಂದ್ರಕ್ಕೆ ಪಿಎಸಿಎಸ್ ಕುಕನೂರು/ಪಿಎಸಿಎಸ್ ಮಸಬಹಂಚಿನಾಳ, ಯಲಬುರ್ಗಾ ಖರೀದಿ ಕೇಂದ್ರಕ್ಕೆ ಟಿಎಪಿಸಿಎಂಎಸ್ ಯಲಬುರ್ಗಾ, ಕುಷ್ಟಗಿ ಖರೀದಿ ಕೇಂದ್ರಕ್ಕೆ ಪಿಎಸಿಎಸ್ ಕುಷ್ಟಗಿ ಹಾಗೂ ಕೊಪ್ಪಳ ಖರೀದಿ ಕೇಂದ್ರಕ್ಕೆ ಪಿಎಸಿಎಸ್ ಹಿರೇಸಿಂಧೋಗಿಯನ್ನು ಏಜೆನ್ಸಿ/ನೋಂದಣಿ ಕೇಂದ್ರವಾಗಿ ಸ್ಥಾಪಿಸಲಾಗಿದೆ.

ಜಿಲ್ಲೆಯಲ್ಲಿ ಪ್ರಾರಂಭಿಸಲಾಗಿರುವ ಹೆಸರುಕಾಳು ಖರೀದಿ ಕೇಂದ್ರಗಳಿಗೆ ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಯಲಬುರ್ಗಾ ಹಾಗೂ ಕುಕನೂರು ತಾಲ್ಲೂಕುಗಳ ಖರೀದಿ ಕೇಂದ್ರಗಳಿಗೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಯಲಬುರ್ಗಾ ಕೇಂದ್ರ ಕಚೇರಿ ಕುಕನೂರಿನ ಕಾರ್ಯದರ್ಶಿ ಸುರೇಶ ಬಿ.ತಂಗನೂರ ಮೊ.ಸಂ.9880886909, ಕೊಪ್ಪಳ ತಾಲ್ಲೂಕಿನ ಹಿರೇಸಿಂಧೋಗಿ ಖರೀದಿ ಕೇಂದ್ರಕ್ಕೆ ಕೊಪ್ಪಳ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿ ಸಿದ್ದಯ್ಯಸ್ವಾಮಿ ಮೊ.ಸಂ.9902224089 ಹಾಗೂ ಕುಷ್ಟಗಿ ಖರೀದಿ ಕೇಂದ್ರಕ್ಕೆ ಕುಷ್ಟಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿ ಗುರುಸ್ವಾಮಿ ಎಸ್ ಗುಡಿ, ಮೊ.ಸಂ.9972054874 ಇವರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡಲಾಗಿದೆ.

ಪ್ರತಿ ಎಕರೆಗೆ 04 ಕ್ವಿಂಟಾಲ್ ಗರಿಷ್ಠ ಪ್ರಮಾಣ ಹಾಗೂ ಪ್ರತಿ ರೈತರಿಂದ ಗರಿಷ್ಠ 20 ಕ್ವಿಂಟಾಲ್ ಹೆಸರುಕಾಳು ಉತ್ಪನ್ನವನ್ನು ಖರೀದಿಸಲಾಗುತ್ತದೆ. ಎಫ್.ಎ.ಕ್ಯೂ ಗುಣಮಟ್ಟದ ಹೆಸರುಕಾಳನ್ನು ಮಾತ್ರ ಖರೀದಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಶಾಖಾ ವ್ಯವಸ್ಥಾಪಕರು, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ, ಕೊಪ್ಪಳ ಮೊ.ಸಂ. 8105690611 ಇವರನ್ನು ಸಂಪರ್ಕಿಸಬಹುದು ಎಂದು ಕೊಪ್ಪಳ ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಕ್ಕಳಿಗೆ ಹಣದ ಉಳಿತಾಯ, ಬ್ಯಾಂಕಿಂಗ್ ಜ್ಞಾನ ಅಗತ್ಯ: ನಾಗರಾಜ್




ಮಾನ್ವಿ: ಮಕ್ಕಳಿಗೆ ಪಠ್ಯ ಶಿಕ್ಷಣದ ಜೊತೆಗೆ ಹಣದ ಮಹತ್ವ, ಉಳಿತಾಯದ ಅಭ್ಯಾಸ, ನಿಯಂತ್ರಿತ ಖರ್ಚು, ಬ್ಯಾಂಕಿಂಗ್ ವ್ಯವಸ್ಥೆ ಹಾಗೂ ವಿಮೆಯ ಕುರಿತು ಪ್ರಾಯೋಗಿಕ ಜ್ಞಾನ ನೀಡುವುದು ಇಂದಿನ ಅಗತ್ಯವಾಗಿದೆ ಎಂದು ಮಾನ್ವಿ ಪಟ್ಟಣ ಸಹಕಾರಿ ಬ್ಯಾಂಕಿನ ಸಿಇಒ ಹಾಗೂ ಲಯನ್ಸ್ ಕ್ಲಬ್‌ನ ನಾಗರಾಜ್ ಹೇಳಿದರು.

ಪಟ್ಟಣದಲ್ಲಿ ಸಮುತ್ಕರ್ಷ ಸಂಸ್ಥೆಯ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಆರ್ಥಿಕ ವ್ಯವಸ್ಥೆ, ಬ್ಯಾಂಕಿಂಗ್ ಹಾಗೂ ವಿಮೆ ಕುರಿತ ವಿಶೇಷ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಅವರು ಮಾತನಾಡಿದರು.

ಮಕ್ಕಳಿಗೆ ಚಿಕ್ಕ ವಯಸ್ಸಿನಿಂದಲೇ ಹಣವನ್ನು ಜವಾಬ್ದಾರಿಯಿಂದ ಬಳಸುವ ವಿಧಾನವನ್ನು ಪಾಲಕರು ತಿಳಿಸಿಕೊಡಬೇಕು. ಗಳಿಕೆ, ಉಳಿತಾಯ ಮತ್ತು ಅಗತ್ಯಕ್ಕೆ ತಕ್ಕಂತೆ ಖರ್ಚು ಮಾಡುವ ಅಭ್ಯಾಸ ಬೆಳೆಸುವುದರಿಂದ ಭವಿಷ್ಯದಲ್ಲಿ ಆರ್ಥಿಕ ಶಿಸ್ತು ರೂಪಿಸಿಕೊಳ್ಳಲು ಸಾಧ್ಯವಾಗುತ್ತದೆ. ಬ್ಯಾಂಕ್ ಖಾತೆ, ಉಳಿತಾಯ, ಹಣಕಾಸು ವ್ಯವಹಾರ ಹಾಗೂ ವಿವಿಧ ರೀತಿಯ ವಿಮಾ ಯೋಜನೆಗಳ ಕುರಿತು ಮೂಲಭೂತ ಅರಿವು ಮೂಡಿಸುವುದು ಸಹ ಮುಖ್ಯವಾಗಿದೆ ಎಂದರು.

ಶಾಲೆಗಳಲ್ಲಿ ವಿಷಯಾಧಾರಿತ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದ್ದು, ಅದರೊಂದಿಗೆ ವಿದ್ಯಾರ್ಥಿಗಳ ನಿತ್ಯಜೀವನಕ್ಕೆ ಅಗತ್ಯವಾದ ಹಣಕಾಸು ಸಾಕ್ಷರತೆ ಸೇರಿದಂತೆ ಪ್ರಾಯೋಗಿಕ ವಿಷಯಗಳನ್ನೂ ಕಲಿಸಬೇಕಾಗಿದೆ. ಇಂತಹ ಜ್ಞಾನವು ವಿದ್ಯಾರ್ಥಿಗಳು ಭವಿಷ್ಯದಲ್ಲಿ ಜವಾಬ್ದಾರಿಯುತ ನಿರ್ಧಾರಗಳನ್ನು ತೆಗೆದುಕೊಳ್ಳಲು ನೆರವಾಗುತ್ತದೆ ಎಂದು ತಿಳಿಸಿದರು.

ಸಮುತ್ಕರ್ಷ ಸಂಸ್ಥೆಯು ಐಎಎಸ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ವಿದ್ಯಾರ್ಥಿಗಳನ್ನು ಸಿದ್ಧಪಡಿಸುವ ಮೂಲಕ ಸದೃಢ ಭಾರತ ನಿರ್ಮಾಣದ ಆಶಯದೊಂದಿಗೆ ಕಾರ್ಯನಿರ್ವಹಿಸುತ್ತಿದೆ. ಮಾನ್ವಿ ನಗರದಲ್ಲಿಯೂ ಸಂಸ್ಥೆಯ ತರಗತಿಗಳು ನಡೆಯುತ್ತಿರುವುದು ಸಂತಸದ ಸಂಗತಿ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಪ್ರಾಸ್ತಾವಿಕವಾಗಿ ಸಮುತ್ಕರ್ಷ ಮಾನ್ವಿಯ ನರಸಿಂಹಮೂರ್ತಿ ದೇಸಾಯಿ ಮಾತನಾಡಿದರು. ನಾಗರಾಜ್ ಅವರ ಪರಿಚಯ ಹಾಗೂ ಸಮುತ್ಕರ್ಷ ಸಂಸ್ಥೆಯ ಚಟುವಟಿಕೆಗಳ ಕುರಿತು ಡಾ. ವಿವೇಕಾನಂದ ಹಬೀಬ್ ಮಾಹಿತಿ ನೀಡಿದರು.

ವಿಶೇಷವಾಗಿ ವಿದ್ಯಾರ್ಥಿಗಳೇ ಕಾರ್ಯಕ್ರಮದ ಸಂಪೂರ್ಣ ನಿರ್ವಹಣೆ ಮಾಡುವ ಮೂಲಕ ಗಮನ ಸೆಳೆದರು. ಇದೇ ಸಂದರ್ಭದಲ್ಲಿ ಕ್ಯಾಪ್ಟನ್ ಸ್ಮಿತ್ ಅವರ ಸಾಹಸ ಹಾಗೂ ಭಾರತೀಯರ ಧೈರ್ಯ-ಸಾಹಸದ ಕುರಿತು ವಿದ್ಯಾರ್ಥಿ ಶಶಾಂಕ್ ಮಾಹಿತಿ ಹಂಚಿಕೊಂಡರು.

ಕಾರ್ಯಕ್ರಮದ ಕೊನೆಯಲ್ಲಿ ಸಮುತ್ಕರ್ಷ ಸಂಸ್ಥೆಯ ವತಿಯಿಂದ ನಾಗರಾಜ್ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

## ಮುಂಗಾರು ಹಂಗಾಮಿನಲ್ಲಿ ಬೆಂಬಲ ಬೆಲೆ ಯೋಜನೆಯಡಿ ಸೂರ್ಯಕಾಂತಿ ಖರೀದಿ: ನೋಂದಣಿ ಕೇಂದ್ರ ಆರಂಭ

ಕೊಪ್ಪಳ, ಅ. 05, (ಕರ್ನಾಟಕ ವಾರ್ತೆ): 2026-27ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರ ನಿಗದಿಪಡಿಸಿರುವ ಬೆಂಬಲ ಬೆಲೆ ದರ ಪ್ರತಿ ಕ್ವಿಂಟಾಲ್ ಗೆ ರೂ.8,343/- ರಂತೆ ಗರಿಷ್ಠ 13,413 ಮೆಟ್ರಿಕ್ ಟನ್ ಎಫ್.ಎ.ಕ್ಯೂ ಗುಣಮಟ್ಟದ ಸೂರ್ಯಕಾಂತಿಯನ್ನು ಬೆಂಬಲ ಬೆಲೆ ಮಾರ್ಗಸೂಚಿಯನ್ವಯ ಜಿಲ್ಲೆಯ ರೈತರಿಂದ ಖರೀದಿಸುವ ಕುರಿತು ಅಕ್ಟೋಬರ್ 3 ರಂದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯಲ್ಲಿ ನಿರ್ಧರಿಸಲಾಗಿದ್ದು, ಸೂರ್ಯಕಾಂತಿ ಖರೀದಿಗೆ ನೋಂದಣಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ.

ಕೊಪ್ಪಳ ತಾಲೂಕಿನ ಅಳವಂಡಿ ಖರೀದಿ ಕೇಂದ್ರಕ್ಕೆ ಕೆಓಎಫ್ ಅಡಿಯಲ್ಲಿ ಒಜಿಸಿಎಸ್ ಅಳವಂಡಿ, ಕುಕನೂರು ತಾಲೂಕಿನ ಕುಕನೂರು ಖರೀದಿ ಕೇಂದ್ರಕ್ಕೆ ಕೆಓಎಫ್ ಅಡಿಯಲ್ಲಿ ಒಜಿಸಿಎಸ್ ಮಂಡಲಗೇರಿ, ಯಲಬುರ್ಗಾ ತಾಲೂಕಿನ ಯಲಬುರ್ಗಾ ಖರೀದಿ ಕೇಂದ್ರಕ್ಕೆ ಕೆಓಎಫ್ ಅಡಿಯಲ್ಲಿ ಒಜಿಸಿಎಸ್ ಬೇವೂರು, ಕಾರಟಗಿ ತಾಲೂಕಿನ ನಾಗನಕಲ್ ಖರೀದಿ ಕೇಂದ್ರಕ್ಕೆ ಕೆಓಎಫ್ ಅಡಿಯಲ್ಲಿ ಒಜಿಸಿಎಸ್ ನಾಗನಕಲ್, ಕುಷ್ಟಗಿ ತಾಲೂಕಿನ ಕುಷ್ಟಗಿ ಖರೀದಿ ಕೇಂದ್ರಕ್ಕೆ ಕೆಓಎಫ್ ಅಡಿಯಲ್ಲಿ ಒಜಿಸಿಎಸ್ ಬೇವೂರು ಖರೀದಿ ಕೇಂದ್ರ, ನೋಂದಣಿ ಏಜೆನ್ಸಿಯಾಗಿ ಪ್ರಾರಂಭಿಸಲಾಗಿದೆ.

ಜಿಲ್ಲೆಯಲ್ಲಿ ಪ್ರಾರಂಭಿಸಲಾಗಿರುವ ಸೂರ್ಯಕಾಂತಿ ಖರೀದಿ ಕೇಂದ್ರಗಳಿಗೆ ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಯಲಬುರ್ಗಾದ ಬೇವೂರು ಹಾಗೂ ಕುಕನೂರಿನ ಮಂಡಲಗೇರಿ ಖರೀದಿ ಕೇಂದ್ರಗಳಿಗೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಯಲಬುರ್ಗಾ ಕೇಂದ್ರ ಕಚೇರಿ ಕುಕನೂರಿನ ಕಾರ್ಯದರ್ಶಿ ಸುರೇಶ ಬಿ.ತಂಗನೂರ ಮೊ.ಸಂ.9880886909, ಕೊಪ್ಪಳ ತಾಲ್ಲೂಕಿನ ಅಳವಂಡಿ ಖರೀದಿ ಕೇಂದ್ರಕ್ಕೆ ಕೊಪ್ಪಳ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿ ಸಿದ್ದಯ್ಯಸ್ವಾಮಿ ಮೊ.ಸಂ.9902224089, ಕುಷ್ಟಗಿ ಖರೀದಿ ಕೇಂದ್ರಕ್ಕೆ ಕುಷ್ಟಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿ ಗುರುಸ್ವಾಮಿ ಎಸ್ ಗುಡಿ, ಮೊ.ಸಂ.9972054874 ಹಾಗೂ ಕಾರಟಗಿ ತಾಲೂಕಿನ ನಾಗನಕಲ್ ಖರೀದಿ ಕೇಂದ್ರಕ್ಕೆ ಕಾರಟಗಿ ಎಪಿಎಂಸಿ ಸಹಾಯಕ ಕಾರ್ಯದರ್ಶಿ ಹರೀಶ ಪತ್ತಾರ ಮೊ.ಸಂ.9060893320 ಇವರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡಲಾಗಿದೆ.

ಪ್ರತಿ ಎಕರೆಗೆ 04 ಕ್ವಿಂಟಾಲ್ ಗರಿಷ್ಠ ಪ್ರಮಾಣ ಹಾಗೂ ಪ್ರತಿ ರೈತರಿಂದ ಗರಿಷ್ಠ 20 ಕ್ವಿಂಟಾಲ್ ಸೂರ್ಯಕಾಂತಿ ಉತ್ಪನ್ನವನ್ನು ಖರೀದಿಸಲಾಗುತ್ತದೆ. ಎಫ್.ಎ.ಕ್ಯೂ ಗುಣಮಟ್ಟದ ಸೂರ್ಯಕಾಂತಿಯನ್ನು ಮಾತ್ರ ಖರೀದಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ರಾಜ್ಯ ಎಣ್ಣೆ, ಬೀಜಗಳ ಬೆಳೆಗಾರರ ಸಹಕಾರ ಸಂಘಗಳ ಒಕ್ಕೂಟ ನಿಯಮಿತ, ರಾಯಚೂರು, ವಿಭಾಗೀಯ ಕಚೇರಿ ಕೊಪ್ಪಳ, ಮೊ.ಸಂ.9591812142 ಇವರನ್ನು ಸಂಪರ್ಕಿಸಬಹುದು ಎಂದು ಕೊಪ್ಪಳ ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬವನಬಾವಿ ವೃತ್ತಕ್ಕೆ ಶ್ರೀಕೃಷ್ಣದೇವರಾಯ ವೃತ್ತ ಎಂದು ನಾಮಕರಣಕ್ಕೆ ಆಗ್ರಹ

ರಾಯಚೂರು, ಅ.5: ನಗರದ ಬವನಬಾವಿ ವೃತ್ತಕ್ಕೆ ವಿಜಯನಗರ ಸಾಮ್ರಾಜ್ಯದ ಪ್ರಸಿದ್ಧ ಚಕ್ರವರ್ತಿ ಶ್ರೀಕೃಷ್ಣದೇವರಾಯ ಅವರ ಹೆಸರನ್ನು ನಾಮಕರಣ ಮಾಡಬೇಕು ಎಂದು ಮುನ್ನೂರುಕಾಪು ಸಮಾಜದ ಮುಖಂಡರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.




ನಗರದ ವಿವಿಧ ವೃತ್ತಗಳಿಗೆ ವಿವಿಧ ಸಮಾಜದ ಮಹನೀಯರ ಹೆಸರನ್ನು ನಾಮಕರಣ ಮಾಡಲಾಗಿದ್ದು, ಅವರ ಜಯಂತಿ ದಿನಗಳಂದು ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಅದೇ ಮಾದರಿಯಲ್ಲಿ ಬವನಬಾವಿ ವೃತ್ತಕ್ಕೆ ಶ್ರೀಕೃಷ್ಣದೇವರಾಯರ ಹೆಸರನ್ನು ನಾಮಕರಣ ಮಾಡುವ ಮೂಲಕ ಅವರಿಗೆ ಗೌರವ ಸಲ್ಲಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ವಿಜಯನಗರ ಸಾಮ್ರಾಜ್ಯದ ಪ್ರಸಿದ್ಧ ದೊರೆ ಶ್ರೀಕೃಷ್ಣದೇವರಾಯರು ಕರ್ನಾಟಕದ ಇತಿಹಾಸದಲ್ಲಿ ವಿಶಿಷ್ಟ ಸ್ಥಾನ ಪಡೆದಿದ್ದಾರೆ. ಅವರ ಆಡಳಿತಾವಧಿಯಲ್ಲಿ ಸಾಹಿತ್ಯ, ಕಲೆ, ಸಂಸ್ಕೃತಿ, ಕೃಷಿ ಹಾಗೂ ವ್ಯಾಪಾರ ಸೇರಿದಂತೆ ಹಲವು ಕ್ಷೇತ್ರಗಳು ಅಭಿವೃದ್ಧಿ ಹೊಂದಿದ್ದವು. ಅವರ ಆಡಳಿತವನ್ನು ಇಂದಿಗೂ ಸುವರ್ಣಯುಗವೆಂದು ಸ್ಮರಿಸಲಾಗುತ್ತಿದೆ ಎಂದು ಮುಖಂಡರು ತಿಳಿಸಿದ್ದಾರೆ.

ಶ್ರೀಕೃಷ್ಣದೇವರಾಯರ ಜಯಂತಿಯನ್ನು ಮುನ್ನೂರುಕಾಪು ಸಮಾಜದ ವತಿಯಿಂದ ಪ್ರತಿವರ್ಷ ಆಚರಿಸಲಾಗುತ್ತಿದೆ. ರಾಯಚೂರು ನಗರದ ಬವನಬಾವಿ ವೃತ್ತದಲ್ಲಿ ಶ್ರೀಕೃಷ್ಣದೇವರಾಯರ ಪ್ರತಿಮೆ ಸ್ಥಾಪಿಸಲು ಸಮಾಜವು ಕಳೆದ 10-12 ವರ್ಷಗಳಿಂದ ಪ್ರಯತ್ನಿಸುತ್ತಿದೆ. ಬವನಬಾವಿ ವೃತ್ತಕ್ಕೆ ಶ್ರೀಕೃಷ್ಣದೇವರಾಯ ವೃತ್ತ ಎಂದು ಅಧಿಕೃತವಾಗಿ ನಾಮಕರಣ ಮಾಡಿದಲ್ಲಿ, ಸಮಾಜದ ವತಿಯಿಂದ ಮೂರು ವರ್ಷಗಳೊಳಗೆ ಪ್ರತಿಮೆ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಮುಂದಿನ ಪೀಳಿಗೆಗೆ ಶ್ರೀಕೃಷ್ಣದೇವರಾಯರ ಆಡಳಿತ, ಸಾಧನೆ ಹಾಗೂ ಕೊಡುಗೆಗಳನ್ನು ಪರಿಚಯಿಸುವ ದೃಷ್ಟಿಯಿಂದ ಸಮಾಜದ ಬೇಡಿಕೆಯನ್ನು ಪರಿಗಣಿಸಿ, ವೃತ್ತಕ್ಕೆ ಅವರ ಹೆಸರನ್ನು ನಾಮಕರಣ ಮಾಡುವುದರ ಜೊತೆಗೆ ಜಯಂತಿಯನ್ನು ಅಧಿಕೃತವಾಗಿ ಆಚರಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ಮುನ್ನೂರುಕಾಪು ಸಮಾಜದ ಮುಖಂಡರಾದ ಭಂಗಿ ಮುನಿರೆಡ್ಡಿ, ಜಿ. ವೆಂಕಟರೆಡ್ಡಿ, ಎ. ಆಶಾರೆಡ್ಡಿ, ಗೋಪಾಲರೆಡ್ಡಿ ಸೇರಿದಂತೆ ಸಮಾಜದ ಇತರ ಮುಖಂಡರು ಉಪಸ್ಥಿತರಿದ್ದರು.

## ಜಿ.ಎ.ವಿ.ಎಸ್. ಜಾಗೃತಿಗಾಗಿ ಮಾನ್ವಿಯಲ್ಲಿ ಸಂಕಲ್ಪ ಬೈಕ್ ರ್‍ಯಾಲಿ

ಮಾನ್ವಿ: ಬೆಂಗಳೂರಿನಲ್ಲಿ ನಡೆಯಲಿರುವ ಅಂತರರಾಷ್ಟ್ರೀಯ ಮಟ್ಟದ ಗ್ಲೋಬಲ್ ಆಕ್ಸಿಲರೇಟರ್ ಮಿಷನ್ ಸಮಿಟ್ (ಜಿ.ಎ.ವಿ.ಎಸ್.) ಕುರಿತು ಜಾಗೃತಿ ಮೂಡಿಸುವ ಹಾಗೂ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವ ಉದ್ದೇಶದಿಂದ ಪಟ್ಟಣದಲ್ಲಿ ಸಂಕಲ್ಪ ಬೈಕ್ ರ್‍ಯಾಲಿ ಹಮ್ಮಿಕೊಳ್ಳಲಾಯಿತು.



ಪಟ್ಟಣದ ಸೂರ್ಯ ಫಂಕ್ಷನ್ ಹಾಲ್ ಸಮೀಪ ಬೈಕ್ ರ್‍ಯಾಲಿಗೆ ಚಾಲನೆ ನೀಡಿ ಮಾತನಾಡಿದ ಕರ್ನಾಟಕ ಆರ್ಯವೈಶ್ಯ ಮಹಾಸಭಾದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಚ್.ಜಿ. ಹನುಮಂತಯ್ಯ ಶೆಟ್ಟಿ, ಅ.2ರಂದು ಬೀದರ್‌ನಿಂದ ಸಂಕಲ್ಪ ಬೈಕ್ ರ್‍ಯಾಲಿಗೆ ಚಾಲನೆ ನೀಡಲಾಗಿದೆ. ರಾಜ್ಯದ ವಿವಿಧ ಭಾಗಗಳಲ್ಲಿ ಸಂಚರಿಸುವ ಮೂಲಕ ಜಿ.ಎ.ವಿ.ಎಸ್. ಕಾರ್ಯಕ್ರಮದ ಕುರಿತು ಸಮುದಾಯದಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.

ಕರ್ನಾಟಕ ಆರ್ಯವೈಶ್ಯ ಮಹಾಸಭಾ 118 ವರ್ಷಗಳನ್ನು ಪೂರೈಸಿದ್ದು, ರಾಜ್ಯದಾದ್ಯಂತ ವಿವಿಧ ಸಾಮಾಜಿಕ ಕಾರ್ಯಕ್ರಮಗಳ ಮೂಲಕ ಸಮಾಜವನ್ನು ಸಂಘಟಿಸುವ ಕಾರ್ಯ ಮಾಡುತ್ತಿದೆ. ವಿಶೇಷವಾಗಿ ಯುವ ಸಮುದಾಯಕ್ಕೆ ಅಂತರರಾಷ್ಟ್ರೀಯ ಮಟ್ಟದ ವ್ಯಾಪಾರ, ಉದ್ಯಮ ಹಾಗೂ ವಿವಿಧ ಕ್ಷೇತ್ರಗಳಲ್ಲಿ ನಡೆಯುತ್ತಿರುವ ಬೆಳವಣಿಗೆಗಳನ್ನು ಪರಿಚಯಿಸಿ ಹೊಸ ಅವಕಾಶಗಳತ್ತ ಪ್ರೋತ್ಸಾಹಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ ಎಂದರು.

ಡಿ.25, 26 ಮತ್ತು 27ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ಅಂತರರಾಷ್ಟ್ರೀಯ ಮಟ್ಟದ ಜಿ.ಎ.ವಿ.ಎಸ್. ಕಾರ್ಯಕ್ರಮ ಆಯೋಜಿಸಲಾಗಿದ್ದು, ವ್ಯಾಪಾರ ಮತ್ತು ಉದ್ಯಮ, ಯುವ ಸಬಲೀಕರಣ, ಮಹಿಳಾ ಸಬಲೀಕರಣ ಹಾಗೂ ಸಾಮಾಜಿಕ ಜಾಗೃತಿ ಸೇರಿದಂತೆ ವಿವಿಧ ವಿಷಯಗಳಿಗೆ ಆದ್ಯತೆ ನೀಡಲಾಗುವುದು ಎಂದು ಹೇಳಿದರು.

ಮಾನ್ವಿ ತಾಲೂಕಿನ ಆರ್ಯವೈಶ್ಯ ಸಮುದಾಯದ ಪುರುಷರು ಹಾಗೂ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಬೈಕ್ ರ್‍ಯಾಲಿಯಲ್ಲಿ ಪಾಲ್ಗೊಂಡರು. ಪಟ್ಟಣದ ಬಸವ ವೃತ್ತ, ವಾಸವಿ ಕಲ್ಯಾಣ ಮಂಟಪ, ಬಸ್ ನಿಲ್ದಾಣ ಹಾಗೂ ವಾಲ್ಮೀಕಿ ವೃತ್ತದ ಮೂಲಕ ಪೋತ್ನಾಳ್ ವರೆಗೆ ರ್‍ಯಾಲಿ ಸಂಚರಿಸಿ ಕಾರ್ಯಕ್ರಮದ ಕುರಿತು ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಶ್ರೀ ನಗರೇಶ್ವರ ಆರ್ಯವೈಶ್ಯ ಸಂಘದ ತಾಲೂಕು ಅಧ್ಯಕ್ಷ ಆರ್. ಮುತ್ತುರಾಜ್ ಶೆಟ್ಟಿ, ಕಾರ್ಯದರ್ಶಿ ಬಿ. ಈರಣ್ಣ ಶೆಟ್ಟಿ, ಕರ್ನಾಟಕ ಆರ್ಯವೈಶ್ಯ ಮಹಾಸಭಾದ ರಾಜ್ಯ ಹಿರಿಯ ಉಪಾಧ್ಯಕ್ಷ ಕುಂಟ್ನಾಳ್ ವೆಂಕಟೇಶ ಶೆಟ್ಟಿ, ರಾಜ್ಯ ನಿರ್ದೇಶಕರಾದ ಭೀಮಶಂಕರ ಶೆಟ್ಟಿ, ಜಗದೀಶ ಗುಪ್ತ, ವಾಸುದೇವ ಶೆಟ್ಟಿ, ಪದಾಧಿಕಾರಿಗಳಾದ ಕೆ. ನವೀನ್ ಕುಮಾರ್, ರಾಘವೇಂದ್ರ ಶೆಟ್ಟಿ, ಪವನ್ ಕುಮಾರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ತಜ್ಞ ವೈದ್ಯರ ಮೇಲ್ವಿಚಾರಣೆಯಲ್ಲೇ ಸುರಕ್ಷಿತ ಗರ್ಭಪಾತ ಸೇವೆ ಪಡೆಯಿರಿ: ಡಾ. ಇಮ್ರಾನ್ ಪರ್ವೇಜ್



ರಾಯಚೂರು, ಅ.5: ಅನಪೇಕ್ಷಿತ ಗರ್ಭಧಾರಣೆಯ ಸಂದರ್ಭದಲ್ಲಿ ಮಹಿಳೆಯರಿಗೆ ಕಾನೂನುಬದ್ಧ, ಸುರಕ್ಷಿತ ಹಾಗೂ ಗುಣಮಟ್ಟದ ಗರ್ಭಪಾತ ಸೇವೆಗಳು ದೊರೆಯುವುದು ಅತ್ಯಂತ ಅಗತ್ಯವಾಗಿದ್ದು, ತಜ್ಞ ವೈದ್ಯರ ಮೇಲ್ವಿಚಾರಣೆಯಲ್ಲಿಯೇ ಗರ್ಭಪಾತ ಸೇವೆ ಪಡೆಯಬೇಕು. ಇಂತಹ ಸಂದರ್ಭಗಳಲ್ಲಿ ತಾತ್ಕಾಲಿಕ ಕುಟುಂಬ ಕಲ್ಯಾಣ ವಿಧಾನಗಳನ್ನು ಸಹ ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ. ಇಮ್ರಾನ್ ಪರ್ವೇಜ್ ತಿಳಿಸಿದರು.

ಸುರಕ್ಷಿತ ಗರ್ಭಪಾತ ದಿನದ ಅಂಗವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕುಟುಂಬ ಕಲ್ಯಾಣ ಕಾರ್ಯಕ್ರಮ ವಿಭಾಗ ಹಾಗೂ ರಾಯಚೂರಿನ ತಾಯಿ ಮತ್ತು ಮಕ್ಕಳ ಆಸ್ಪತ್ರೆ ವತಿಯಿಂದ ಆಸ್ಪತ್ರೆಯಲ್ಲಿ ತಾಯಂದಿರಿಗಾಗಿ ಹಮ್ಮಿಕೊಂಡಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಗರ್ಭಧಾರಣೆಯ ಆರಂಭಿಕ ಹಂತದಲ್ಲಿ ವೈದ್ಯಕೀಯ ಮೇಲ್ವಿಚಾರಣೆಯಲ್ಲಿ ಮಾತ್ರೆಗಳ ಮೂಲಕ ಗರ್ಭಪಾತ ಮಾಡಿಸಿಕೊಳ್ಳುವುದು ಸುರಕ್ಷಿತವಾಗಿದೆ. ಮಹಿಳೆಯರಿಗೆ ಅಗತ್ಯ ವೈದ್ಯಕೀಯ ಸಲಹೆ ಮತ್ತು ಸುರಕ್ಷಿತ ಸೇವೆಗಳು ಸುಲಭವಾಗಿ ದೊರೆಯುವಂತಾಗಬೇಕು. ಗರ್ಭಪಾತಕ್ಕೆ ಸಂಬಂಧಿಸಿದಂತೆ ವೈದ್ಯರ ಸಲಹೆಯನ್ನು ಕಡ್ಡಾಯವಾಗಿ ಪಡೆಯಬೇಕು ಎಂದು ಹೇಳಿದರು.

ಭಾರತದಲ್ಲಿ 1971ರ ವೈದ್ಯಕೀಯ ಗರ್ಭಪಾತ ಕಾಯ್ದೆಗೆ 2021ರಲ್ಲಿ ತಿದ್ದುಪಡಿ ತರಲಾಗಿದ್ದು, ನಿಗದಿತ ಷರತ್ತುಗಳಡಿ 20 ವಾರಗಳವರೆಗೆ ಒಬ್ಬ ನೋಂದಾಯಿತ ವೈದ್ಯರ ಅಭಿಪ್ರಾಯ ಹಾಗೂ 20ರಿಂದ 24 ವಾರಗಳವರೆಗೆ ನಿರ್ದಿಷ್ಟ ವರ್ಗದ ಪ್ರಕರಣಗಳಲ್ಲಿ ಇಬ್ಬರು ನೋಂದಾಯಿತ ವೈದ್ಯರ ಅಭಿಪ್ರಾಯದೊಂದಿಗೆ ಗರ್ಭಪಾತಕ್ಕೆ ಕಾನೂನಿನಲ್ಲಿ ಅವಕಾಶ ಕಲ್ಪಿಸಲಾಗಿದೆ ಎಂದು ಮಾಹಿತಿ ನೀಡಿದರು.

ಪ್ರಸೂತಿ ತಜ್ಞೆ ಡಾ. ಉಜ್ಮಾ ಯಾಸ್ಮೀನ್ ಮಾತನಾಡಿ, ಗರ್ಭಪಾತ ಸೇವೆ ಪಡೆಯುವ ಮಹಿಳೆಯ ವೈಯಕ್ತಿಕ ವಿವರ ಮತ್ತು ಗುರುತಿನ ಗೌಪ್ಯತೆಯನ್ನು ಕಾಪಾಡಲಾಗುತ್ತದೆ ಎಂದು ತಿಳಿಸಿದರು.

ಸುರಕ್ಷಿತ ಗರ್ಭಪಾತವು ಮಹಿಳೆಯ ಆರೋಗ್ಯದ ದೃಷ್ಟಿಯಿಂದ ಅತ್ಯಂತ ಮಹತ್ವದ್ದಾಗಿದೆ. ಗರ್ಭಾವಸ್ಥೆಯ ಅವಧಿ ಹಾಗೂ ಮಹಿಳೆಯ ಆರೋಗ್ಯ ಸ್ಥಿತಿಯನ್ನು ಪರಿಶೀಲಿಸಿ ವೈದ್ಯಕೀಯ ವಿಧಾನ ಅಥವಾ ಅಗತ್ಯವಿದ್ದಲ್ಲಿ ಶಸ್ತ್ರಚಿಕಿತ್ಸಾ ವಿಧಾನವನ್ನು ತಜ್ಞ ವೈದ್ಯರು ನಿರ್ಧರಿಸುತ್ತಾರೆ. ವೈದ್ಯರ ಸಲಹೆ ಮತ್ತು ಮೇಲ್ವಿಚಾರಣೆ ಇಲ್ಲದೆ ಸ್ವಂತ ನಿರ್ಧಾರದಿಂದ ಗರ್ಭಪಾತದ ಮಾತ್ರೆಗಳನ್ನು ಸೇವಿಸುವುದು ಅಪಾಯಕಾರಿಯಾಗಿದೆ ಎಂದು ಡಾ. ಉಜ್ಮಾ ಯಾಸ್ಮೀನ್ ಎಚ್ಚರಿಸಿದರು.

ಗರ್ಭಪಾತದ ನಂತರ ಸೋಂಕು ತಡೆಗಟ್ಟಲು ಅಗತ್ಯ ವಿಶ್ರಾಂತಿ, ವೈದ್ಯರು ಸೂಚಿಸಿದ ಔಷಧಿಗಳ ಸೇವನೆ ಹಾಗೂ ವೈಯಕ್ತಿಕ ನೈರ್ಮಲ್ಯ ಕಾಪಾಡಿಕೊಳ್ಳುವುದು ಮುಖ್ಯ. ಸರ್ಕಾರದಿಂದ ಅನುಮೋದಿತ ಆಸ್ಪತ್ರೆ ಅಥವಾ ಅರ್ಹ ತಜ್ಞ ವೈದ್ಯರ ಮಾರ್ಗದರ್ಶನದಲ್ಲಿಯೇ ಸೇವೆ ಪಡೆಯಬೇಕು. ಅನಧಿಕೃತ ಚಿಕಿತ್ಸಾ ಕೇಂದ್ರಗಳು ಅಥವಾ ವೈದ್ಯಕೀಯವಾಗಿ ದೃಢೀಕರಿಸದ ಮನೆಮದ್ದುಗಳಿಗೆ ಮೊರೆಹೋಗುವುದು ಆರೋಗ್ಯ ಮತ್ತು ಜೀವಕ್ಕೆ ಅಪಾಯ ತಂದೊಡ್ಡಬಹುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಅರವಳಿಕೆ ತಜ್ಞ ಡಾ. ಸರ್ಫರಾಜ್ ಖಾಜಿ, ರೇಡಿಯಾಲಜಿಸ್ಟ್ ಡಾ. ಭುವನೇಶ್ವರಿ, ಫಿಸಿಷಿಯನ್ ಡಾ. ಬಶೀಫ್ ಲತೀಫ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನರ್ವ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಜಿಲ್ಲಾ ಆರೋಗ್ಯ ಮೇಲ್ವಿಚಾರಣಾಧಿಕಾರಿ ಪುಂಡಲೀಕ ಗಂಜಿ, ಹಿರಿಯ ಶುಶ್ರೂಷಾಧಿಕಾರಿ ಸಲೋಮಿ, ಹಿರಿಯ ಪ್ರಾಥಮಿಕ ಆರೋಗ್ಯ ನಿರೀಕ್ಷಣಾಧಿಕಾರಿ ವಿಜಯಲಕ್ಷ್ಮಿ, ಫಾರ್ಮಸಿ ಅಧಿಕಾರಿ ದೊಡ್ಡಮ್ಮ, ಕುಟುಂಬ ಕಲ್ಯಾಣ ಆಪ್ತ ಸಮಾಲೋಚಕಿ ನಿಮಿಷಾ, ಆರೋಗ್ಯ ಮಿತ್ರ ತುಳಸಿದಾಸ್, ಆಸ್ಪತ್ರೆಯ ಅಧಿಕಾರಿಗಳು, ಸಿಬ್ಬಂದಿ, ಆಶಾ ಕಾರ್ಯಕರ್ತೆಯರು ಹಾಗೂ ತಾಯಂದಿರು ಭಾಗವಹಿಸಿದ್ದರು.

## ರೈತರ ವಿವಿಧ ಬೇಡಿಕೆ ಈಡೇರಿಕೆಗೆ ಅ.7ರಂದು ಪೋತ್ನಾಳ್ ಹೆದ್ದಾರಿಯಲ್ಲಿ ರಸ್ತೆ ತಡೆ: ಅಮೀನಪಾಶ ದಿದ್ದಿಗಿ

ಮಾನ್ವಿ: ಜೋಳ ಖರೀದಿ ಹಣ ಪಾವತಿ, ಕಾಲುವೆಯ ಕೊನೆಯ ಭಾಗದ ರೈತರಿಗೆ ಸಮರ್ಪಕ ನೀರು, ಬರ ಪರಿಹಾರ, ಕೃಷಿ ಪಂಪ್ ಸೆಟ್‌ಗಳಿಗೆ ನಿರಂತರ ವಿದ್ಯುತ್ ಸೇರಿದಂತೆ ರೈತರ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಅ.7ರಂದು ಬೆಳಿಗ್ಗೆ 10 ಗಂಟೆಯಿಂದ ಪೋತ್ನಾಳ್ ಹೆದ್ದಾರಿ ಬಂದ್ ಮಾಡಿ ರಸ್ತೆ ತಡೆ ಹಾಗೂ ಅನಿರ್ದಿಷ್ಟಾವಧಿ ಧರಣಿ ನಡೆಸಲಾಗುವುದು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ಅಮೀನಪಾಶ ದಿದ್ದಿಗಿ ತಿಳಿಸಿದರು.



ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಖರೀದಿ ಕೇಂದ್ರಗಳ ಮೂಲಕ ಜೋಳ ಮಾರಾಟ ಮಾಡಿದ ರೈತರಿಗೆ ಗ್ರೀನ್ ವೋಚರ್ ನೀಡಿದ ಎಂಟು ದಿನಗಳೊಳಗೆ ಹಣವನ್ನು ಖಾತೆಗೆ ಜಮಾ ಮಾಡುವುದಾಗಿ ಭರವಸೆ ನೀಡಲಾಗಿತ್ತು. ಆದರೆ ಜೋಳ ಮಾರಾಟ ಮಾಡಿ ಒಂದು ವರ್ಷ ಕಳೆದರೂ ಹಲವು ರೈತರಿಗೆ ಹಣ ಪಾವತಿಯಾಗಿಲ್ಲ ಎಂದು ಆರೋಪಿಸಿದರು.

ಈ ಹಿಂದೆ ಪೋತ್ನಾಳ್ ಗ್ರಾಮದಲ್ಲಿ ಜೋಳದ ಬಾಕಿ ಹಣ ಪಾವತಿಸುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿದ ಸಂದರ್ಭದಲ್ಲಿ ಸೆ.30ರೊಳಗೆ ರೈತರ ಖಾತೆಗೆ ಹಣ ಜಮಾ ಮಾಡುವುದಾಗಿ ಜಿಲ್ಲಾಧಿಕಾರಿಗಳು ಭರವಸೆ ನೀಡಿದ್ದರು. ಆ ಗಡುವು ಮುಗಿದಿದ್ದರೂ ಹಣ ಪಾವತಿಯಾಗಿಲ್ಲ. ಇದರಿಂದ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಹೇಳಿದರು.

ತುಂಗಭದ್ರಾ ಎಡದಂಡೆ ಮುಖ್ಯ ಕಾಲುವೆಯಿಂದ ಪ್ರತಿದಿನ ಸುಮಾರು ಒಂದು ಸಾವಿರ ಕ್ಯೂಸೆಕ್ ನೀರನ್ನು ಅನಧಿಕೃತವಾಗಿ ಬಳಸಲಾಗುತ್ತಿದೆ. ಈ ಬಗ್ಗೆ ನೀರಾವರಿ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ಇದ್ದರೂ ಅಕ್ರಮ ನೀರಾವರಿ ತಡೆಯಲು ಪರಿಣಾಮಕಾರಿ ಕ್ರಮ ಕೈಗೊಂಡಿಲ್ಲ. ಪರಿಣಾಮ 104 ಮೈಲ್ ಡಿಸ್ಟ್ರಿಬ್ಯೂಟರಿ ಸೇರಿದಂತೆ ಉಪಕಾಲುವೆಗಳ ಕೊನೆಯ ಭಾಗದ ರೈತರ ಜಮೀನುಗಳಿಗೆ ನೀರು ತಲುಪುತ್ತಿಲ್ಲ ಎಂದು ಆರೋಪಿಸಿದರು.

ಕಾಲುವೆಯ 600 ಮೀಟರ್ ವ್ಯಾಪ್ತಿಯಲ್ಲಿ ಕೆರೆ ನಿರ್ಮಿಸುವಂತಿಲ್ಲ ಎಂಬ ನಿಯಮವಿದ್ದರೂ, ಕೆಲವೆಡೆ ಅನಧಿಕೃತವಾಗಿ ಕೆರೆಗಳನ್ನು ನಿರ್ಮಿಸಿ ಕಾಲುವೆಯಿಂದ ನೀರು ತುಂಬಿಸಿಕೊಳ್ಳಲಾಗುತ್ತಿದೆ. ಇಂತಹ ಅಕ್ರಮಗಳ ವಿರುದ್ಧ ಜಿಲ್ಲಾಡಳಿತ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ರಾಜ್ಯದಲ್ಲಿ ತೀವ್ರ ಬರ ಪರಿಸ್ಥಿತಿ ಎದುರಾಗಿದ್ದು ರೈತರು ಸಂಕಷ್ಟದಲ್ಲಿದ್ದಾರೆ. ನಿಯಮಾನುಸಾರ ಬೆಳೆ ಹಾನಿಗೆ ಸೂಕ್ತ ಪರಿಹಾರ ನೀಡಬೇಕು. ಸರ್ಕಾರ ಘೋಷಿಸಿರುವ ಪರಿಹಾರ ಮೊತ್ತ ರೈತರ ನಷ್ಟಕ್ಕೆ ಹೋಲಿಸಿದರೆ ಅತ್ಯಲ್ಪವಾಗಿದೆ. ಬೆಳೆ ವಿಮಾ ಕಂಪನಿಗಳ ಅವೈಜ್ಞಾನಿಕ ನಿಯಮಗಳಿಂದ ಬೆಳೆ ನಷ್ಟ ಅನುಭವಿಸಿದ ರೈತರು ಪರಿಹಾರ ಪಡೆಯಲು ಸಮಸ್ಯೆ ಎದುರಿಸುತ್ತಿದ್ದಾರೆ ಎಂದು ದೂರಿದರು.

ಈ ಎಲ್ಲ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಅ.7ರಂದು ಸಾವಿರಾರು ರೈತರೊಂದಿಗೆ ಪೋತ್ನಾಳ್ ಹೆದ್ದಾರಿಯಲ್ಲಿ ರಸ್ತೆ ತಡೆ ನಡೆಸಿ ಅನಿರ್ದಿಷ್ಟಾವಧಿ ಧರಣಿ ಆರಂಭಿಸಲಾಗುವುದು ಎಂದು ಅಮೀನಪಾಶ ದಿದ್ದಿಗಿ ತಿಳಿಸಿದರು.

ರೈತ ಮುಖಂಡ ದುರುಗಪ್ಪ ತಡಕಲ್ ಮಾತನಾಡಿ, ಪೋತ್ನಾಳ್ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಜನರು ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ಅನುಕೂಲಕ್ಕಾಗಿ ಪೋತ್ನಾಳ್ ಹಿರೇಹಳ್ಳಕ್ಕೆ ನೀರು ಹರಿಸಬೇಕು. ಕೃಷಿ ಪಂಪ್‌ಸೆಟ್‌ಗಳಿಗೆ ಜೆಸ್ಕಾಂನಿಂದ ನಿರಂತರ ಎಂಟು ತಾಸು ವಿದ್ಯುತ್ ಪೂರೈಸಬೇಕು ಎಂದು ಒತ್ತಾಯಿಸಿದರು.

ಬರಗಾಲದಿಂದ ರೈತರ ಆದಾಯಕ್ಕೆ ಹೊಡೆತ ಬಿದ್ದಿರುವ ಹಿನ್ನೆಲೆಯಲ್ಲಿ ಬ್ಯಾಂಕ್‌ಗಳಲ್ಲಿ ಪಡೆದ ಕೃಷಿ ಸಾಲ ಮರುಪಾವತಿಗೆ ಹೆಚ್ಚಿನ ಕಾಲಾವಕಾಶ ನೀಡಬೇಕು. ಸಾಲ ಮರುಪಾವತಿಸುವಂತೆ ಬ್ಯಾಂಕ್‌ಗಳು ರೈತರ ಮೇಲೆ ಒತ್ತಡ ಹೇರಬಾರದು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ರೈತರಾದ ನಾಗನಗೌಡ ಪೋತ್ನಾಳ್, ಅಮರೇಶ್ ಜೀನೂರು, ವಿಶ್ವನಾಥ್ ಗೌಡ, ಶರಣಪ್ಪ ಹೂರ್ಗಾ, ಸೋಮನಾಥ್ ಬದರ್ಲಿ, ಶಿವಕುಮಾರ್ ತಡಕಲ್, ಮಹದೇವ್ ತಡಕಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಆತ್ಮವಿಶ್ವಾಸ ಬೆಳೆಸಿಕೊಳ್ಳಿ, ಆತ್ಮಹತ್ಯೆ ಪರಿಹಾರವಲ್ಲ: ಅರವಿಂದ ಕುಮಾರ

ಮಟಮಾರಿ: ಜೀವನದಲ್ಲಿ ಎದುರಾಗುವ ಸಮಸ್ಯೆಗಳಿಗೆ ಆತ್ಮಹತ್ಯೆ ಪರಿಹಾರವಲ್ಲ. ಸಂಕಷ್ಟದ ಸಂದರ್ಭಗಳಲ್ಲಿ ಆತ್ಮವಿಶ್ವಾಸ ಕಳೆದುಕೊಳ್ಳದೆ, ನಂಬಿಕಸ್ಥರೊಂದಿಗೆ ಸಮಸ್ಯೆಗಳನ್ನು ಹಂಚಿಕೊಂಡು ಸೂಕ್ತ ಸಮಾಲೋಚನೆ ಮತ್ತು ಮಾನಸಿಕ ನೆರವು ಪಡೆಯಬೇಕು ಎಂದು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಅರವಿಂದ ಕುಮಾರ ಹೇಳಿದರು.



ಮಟಮಾರಿಯ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ಹಮ್ಮಿಕೊಂಡಿದ್ದ ವಿಶ್ವ ಆತ್ಮಹತ್ಯೆ ತಡೆ ದಿನಾಚರಣೆ ಹಾಗೂ ವಿದ್ಯಾರ್ಥಿಗಳ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರತಿವರ್ಷ ಸೆ.10ರಂದು ವಿಶ್ವ ಆತ್ಮಹತ್ಯೆ ತಡೆ ದಿನವನ್ನು ಆಚರಿಸಲಾಗುತ್ತದೆ. ಆತ್ಮಹತ್ಯೆ ತಡೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು, ಮಾನಸಿಕ ಆರೋಗ್ಯ ಸಮಸ್ಯೆಗಳ ಕುರಿತು ಮುಕ್ತವಾಗಿ ಮಾತನಾಡಲು ಪ್ರೋತ್ಸಾಹಿಸುವುದು ಹಾಗೂ ಸಂಕಷ್ಟದಲ್ಲಿರುವವರಿಗೆ ಸಕಾಲದಲ್ಲಿ ನೆರವು ದೊರೆಯುವಂತೆ ಮಾಡುವುದು ಈ ದಿನದ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

ಖಿನ್ನತೆ, ತೀವ್ರ ಒತ್ತಡ ಅಥವಾ ಆತ್ಮಹತ್ಯೆಯ ಆಲೋಚನೆಗಳ ಕುರಿತು ಮಾತನಾಡುವುದು ತಪ್ಪಲ್ಲ. ಇಂತಹ ಸಮಸ್ಯೆಗಳನ್ನು ಮುಚ್ಚಿಡದೆ ಕುಟುಂಬದ ಸದಸ್ಯರು, ಸ್ನೇಹಿತರು, ಶಿಕ್ಷಕರು ಅಥವಾ ಆರೋಗ್ಯ ತಜ್ಞರೊಂದಿಗೆ ಹಂಚಿಕೊಳ್ಳಬೇಕು. ಸಕಾಲಿಕ ಮಾತುಕತೆ, ಸಮಾಲೋಚನೆ ಹಾಗೂ ಮಾನಸಿಕ ಆರೋಗ್ಯ ನೆರವಿನಿಂದ ಅನೇಕ ಜೀವಗಳನ್ನು ಉಳಿಸಲು ಸಾಧ್ಯ ಎಂದರು.

ಹಿರಿಯ ಆರೋಗ್ಯ ನಿರೀಕ್ಷಕ ವಸಂತ ಮಾತನಾಡಿ, ಆತ್ಮಹತ್ಯೆಯ ಆಲೋಚನೆಗಳು ಬಹುತೇಕ ಸಂದರ್ಭಗಳಲ್ಲಿ ಏಕಾಏಕಿ ಕಾಣಿಸಿಕೊಳ್ಳುವುದಿಲ್ಲ. ವ್ಯಕ್ತಿಯ ಮಾತು, ನಡವಳಿಕೆ ಹಾಗೂ ದೈನಂದಿನ ಅಭ್ಯಾಸಗಳಲ್ಲಿ ಕೆಲವು ಬದಲಾವಣೆಗಳು ಕಂಡುಬರಬಹುದು. ಅವುಗಳನ್ನು ಕುಟುಂಬದವರು, ಸ್ನೇಹಿತರು ಹಾಗೂ ಶಿಕ್ಷಕರು ನಿರ್ಲಕ್ಷಿಸದೆ ಸೂಕ್ತವಾಗಿ ಸ್ಪಂದಿಸಬೇಕು ಎಂದರು.

ಇಷ್ಟದ ಕೆಲಸ ಅಥವಾ ಹವ್ಯಾಸಗಳಲ್ಲಿ ಹಠಾತ್ ಆಸಕ್ತಿ ಕಳೆದುಕೊಳ್ಳುವುದು, ನಿದ್ರೆಯ ಅಭ್ಯಾಸದಲ್ಲಿ ತೀವ್ರ ಬದಲಾವಣೆ, ಆಹಾರ ಸೇವನೆಯಲ್ಲಿ ವ್ಯತ್ಯಾಸ, ಮದ್ಯ ಅಥವಾ ಮಾದಕ ವಸ್ತುಗಳ ಬಳಕೆ ಹೆಚ್ಚಾಗುವುದು, ಪ್ರೀತಿಯ ಅಥವಾ ಮೌಲ್ಯಯುತ ವಸ್ತುಗಳನ್ನು ಏಕಾಏಕಿ ಇತರರಿಗೆ ನೀಡುವುದು, ಪದೇಪದೇ ವಿದಾಯ ಹೇಳುವ ರೀತಿಯಲ್ಲಿ ಮಾತನಾಡುವುದು ಮುಂತಾದ ಬದಲಾವಣೆಗಳು ಕಂಡುಬಂದರೆ ಅವುಗಳನ್ನು ಗಂಭೀರವಾಗಿ ಪರಿಗಣಿಸಿ ತಜ್ಞರ ನೆರವು ಪಡೆಯಬೇಕು ಎಂದು ತಿಳಿಸಿದರು.

ಆರೋಗ್ಯ ನಿರೀಕ್ಷಕ ಯೆಲ್ಲಾಲಿಂಗ ಮಾತನಾಡಿ, ಜೀವನದಲ್ಲಿ ಕಷ್ಟ-ಸುಖಗಳನ್ನು ಸಮಚಿತ್ತದಿಂದ ಸ್ವೀಕರಿಸಬೇಕು. ಒಂದು ಕ್ಷಣದ ನಿರ್ಧಾರದಿಂದ ಅಮೂಲ್ಯ ಜೀವನವನ್ನು ಕಳೆದುಕೊಳ್ಳಬಾರದು. ಒತ್ತಡ ಮತ್ತು ಸಮಸ್ಯೆಗಳನ್ನು ಮನಸ್ಸಿನಲ್ಲೇ ಇಟ್ಟುಕೊಳ್ಳದೆ ನಂಬಿಕಸ್ಥರೊಂದಿಗೆ ಹಂಚಿಕೊಳ್ಳಬೇಕು. ಅಗತ್ಯವಿದ್ದಾಗ ಸಮಾಲೋಚನೆ ಪಡೆಯುವುದರಿಂದ ಸಂಕಷ್ಟದಿಂದ ಹೊರಬರಲು ಸಾಧ್ಯ ಎಂದು ಹೇಳಿದರು.

ಉಪನ್ಯಾಸಕರಾದ ಶಿವರಾಜ್ ಹಾಗೂ ವೀರೇಂದ್ರ ವಿದ್ಯಾರ್ಥಿಗಳಿಗೆ ಆತ್ಮವಿಶ್ವಾಸದಿಂದ ಬದುಕನ್ನು ಎದುರಿಸುವಂತೆ ಸಂದೇಶ ನೀಡಿದರು. ಇದೇ ಸಂದರ್ಭದಲ್ಲಿ ಅರವಿಂದ ಕುಮಾರ ವಿದ್ಯಾರ್ಥಿಗಳಿಗೆ ಆತ್ಮಹತ್ಯೆ ತಡೆ ಕುರಿತ ಪ್ರತಿಜ್ಞಾವಿಧಿ ಬೋಧಿಸಿದರು.

ಆಶಾ ಕಾರ್ಯಕರ್ತೆ ಸುಭದ್ರ ಕಾರ್ಯಕ್ರಮ ನಿರೂಪಿಸಿದರು. ಚಂದ್ರಿಕಾ ವಂದಿಸಿದರು. ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಎನ್‌ಎಸ್‌ಎಸ್ ಶಿಬಿರದಲ್ಲಿ ರಾಷ್ಟ್ರಧ್ವಜ, ಎಚ್‌ಐವಿಏಡ್ಸ್ ಹಾಗೂ ಕೃಷಿ ಕುರಿತು ಜಾಗೃತಿ

ಗಬ್ಬೂರು, ಅ.5: ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ, ರಾಯಚೂರು ಹಾಗೂ ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಹೇರೂರು ಚಂದ್ರಾಯಗೌಡ ಮಲ್ಹಾರ ಸಿದ್ದಪ್ಪಗೌಡ ಕರೆಡ್ಡಿ ಶಿಕ್ಷಣ ಮಹಾವಿದ್ಯಾಲಯ ಮತ್ತು ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಘಟಕದ ವತಿಯಿಂದ ದೇವದುರ್ಗ ತಾಲೂಕಿನ ಗಬ್ಬೂರಿನ ಎಸ್‌ಎಲ್‌ಡಿ ಪಬ್ಲಿಕ್ ಶಾಲೆಯಲ್ಲಿ ನಡೆಯುತ್ತಿರುವ ವಾರ್ಷಿಕ ವಿಶೇಷ ಶಿಬಿರದ ಮೂರನೇ ದಿನ ರಾಷ್ಟ್ರಧ್ವಜದ ಮಹತ್ವ, ಎಚ್‌ಐವಿಏಡ್ಸ್ ಜಾಗೃತಿ ಹಾಗೂ ಕೃಷಿಯ ಮಹತ್ವ ಕುರಿತು ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಯಿತು.



ಮುಂಜಾನೆ ರಾಷ್ಟ್ರಧ್ವಜ ಕಟ್ಟುವುದು, ರಾಷ್ಟ್ರಗೀತೆ ಮತ್ತು ವಂದೇ ಮಾತರಂ ಕುರಿತು ನಡೆದ ಜಾಗೃತಿ ಕಾರ್ಯಕ್ರಮದಲ್ಲಿ ಮುಖ್ಯ ಉಪನ್ಯಾಸಕರಾಗಿ ಭಾಗವಹಿಸಿದ್ದ ಭಾರತೀಯ ಸೇವಾದಳದ ಸಂಚಾಲಕ ವಿದ್ಯಾಸಾಗರ ಚಿಮಣಿಗೆರೆ ಮಾತನಾಡಿ, ರಾಷ್ಟ್ರಧ್ವಜವು ದೇಶದ ಸ್ವಾತಂತ್ರ್ಯ, ಸಾರ್ವಭೌಮತ್ವ, ಏಕತೆ ಮತ್ತು ರಾಷ್ಟ್ರೀಯ ಗೌರವದ ಪ್ರತೀಕವಾಗಿದೆ. ರಾಷ್ಟ್ರಧ್ವಜವನ್ನು ಗೌರವದಿಂದ ಹಾರಿಸುವುದು ಪ್ರತಿಯೊಬ್ಬ ಭಾರತೀಯನ ಕರ್ತವ್ಯವಾಗಿದ್ದು, ಧ್ವಜಾರೋಹಣ ಸಂದರ್ಭದಲ್ಲಿ ಪಾಲಿಸಬೇಕಾದ ನಿಯಮಗಳ ಕುರಿತು ಪ್ರತಿಯೊಬ್ಬರೂ ಅರಿವು ಹೊಂದಿರಬೇಕು ಎಂದರು.

ದೈಹಿಕ ಶಿಕ್ಷಣ ನಿರ್ದೇಶಕ ಹಾಗೂ ಎನ್ ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಶಶಿಕುಮಾರ್ ಮಾತನಾಡಿ, ರಾಷ್ಟ್ರಧ್ವಜದ ಗೌರವ ಕಾಪಾಡುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ. ಪ್ರಶಿಕ್ಷಣಾರ್ಥಿಗಳು ಶಿಬಿರದಲ್ಲಿ ಪಡೆದ ಜ್ಞಾನವನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಸಮಾಜದಲ್ಲಿಯೂ ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಂಶುಪಾಲ ಹಾಗೂ ಸೇವಾದಳದ ಜಿಲ್ಲಾ ಕಾರ್ಯದರ್ಶಿ ಡಾ. ಮಂಜುನಾಥ ಪಾಟೀಲ ವಟಗಲ ಮಾತನಾಡಿ, ರಾಷ್ಟ್ರಧ್ವಜ ನಮ್ಮ ದೇಶದ ಹೆಮ್ಮೆ ಮತ್ತು ಗೌರವದ ಸಂಕೇತವಾಗಿದೆ. ಪ್ರಶಿಕ್ಷಣಾರ್ಥಿಗಳು ರಾಷ್ಟ್ರೀಯ ಏಕತೆ, ಶಿಸ್ತು ಹಾಗೂ ದೇಶಪ್ರೇಮದ ಸಂದೇಶವನ್ನು ಸಮಾಜಕ್ಕೆ ತಲುಪಿಸುವ ರಾಯಭಾರಿಗಳಾಗಬೇಕು ಎಂದು ಕರೆ ನೀಡಿದರು.

ಬೆಳಿಗ್ಗೆ 11 ಗಂಟೆಗೆ ಎನ್‌ಎಸ್‌ಎಸ್ ಪ್ರಶಿಕ್ಷಣಾರ್ಥಿಗಳಿಂದ ಎಚ್‌ಐವಿಏಡ್ಸ್ ಜಾಗೃತಿ ಜಾಥಾ ನಡೆಸಲಾಯಿತು. ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿದ ಪ್ರಶಿಕ್ಷಣಾರ್ಥಿಗಳು ಘೋಷಣೆಗಳು ಹಾಗೂ ಜಾಗೃತಿ ಸಂದೇಶಗಳ ಮೂಲಕ ಎಚ್‌ಐವಿ ಸೋಂಕಿನ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು.

ಎಚ್‌ಐವಿಏಡ್ಸ್ ಕುರಿತು ಸಮಾಜದಲ್ಲಿರುವ ತಪ್ಪು ಕಲ್ಪನೆಗಳನ್ನು ನಿವಾರಿಸುವುದು, ಸೋಂಕು ತಡೆಗಟ್ಟುವ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಮಾಹಿತಿ ನೀಡುವುದು ಹಾಗೂ ಆರೋಗ್ಯಕರ ಜೀವನಶೈಲಿಯ ಮಹತ್ವವನ್ನು ತಿಳಿಸುವುದು ಜಾಥಾದ ಉದ್ದೇಶವಾಗಿತ್ತು.

ಸಂಜೆ ಪ್ರಸ್ತುತ ದಿನಗಳಲ್ಲಿ ಕೃಷಿಯ ಮಹತ್ವ ವಿಷಯದ ಕುರಿತು ನಡೆದ ಉಪನ್ಯಾಸ ಕಾರ್ಯಕ್ರಮದಲ್ಲಿ ದೇವೇಂದ್ರಪ್ಪ ಗಾದಗೋಪಾಳಪುರ ಮಾತನಾಡಿ, ಕೃಷಿಯು ಭಾರತದ ಆರ್ಥಿಕ ವ್ಯವಸ್ಥೆಯ ಪ್ರಮುಖ ಆಧಾರವಾಗಿದೆ. ಆಹಾರ ಉತ್ಪಾದನೆಯ ಜೊತೆಗೆ ಕೋಟ್ಯಂತರ ಜನರಿಗೆ ಉದ್ಯೋಗ ಹಾಗೂ ಜೀವನೋಪಾಯ ಒದಗಿಸುತ್ತಿರುವ ಕೃಷಿ ಕ್ಷೇತ್ರದಲ್ಲಿ ಆಧುನಿಕ ತಂತ್ರಜ್ಞಾನ ಮತ್ತು ವೈಜ್ಞಾನಿಕ ಪದ್ಧತಿಗಳನ್ನು ಅಳವಡಿಸಿಕೊಂಡು ಕೃಷಿಯನ್ನು ಮತ್ತಷ್ಟು ಲಾಭದಾಯಕವಾಗಿಸಬೇಕು. ಯುವಜನರು ಕೃಷಿಯತ್ತ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದರು.

ಮುಖ್ಯ ಅತಿಥಿ, ಅಖಿಲ ಭಾರತ ವೀರಶೈವ ಸದಸ್ಯ ಸಚಿನ್ ಪಾಟೀಲ ಮಾತನಾಡಿ, ರೈತರು ದೇಶದ ಬೆನ್ನೆಲುಬಾಗಿದ್ದು, ಕೃಷಿ ಕ್ಷೇತ್ರದ ಅಭಿವೃದ್ಧಿಗೆ ಸಮಾಜದ ಪ್ರತಿಯೊಬ್ಬರೂ ಸಹಕಾರ ನೀಡಬೇಕು ಎಂದರು.

ಕಲ್ಲಯ್ಯಸ್ವಾಮಿ ಮಾತನಾಡಿ, ಆಧುನಿಕ ತಂತ್ರಜ್ಞಾನ ಬಳಸಿಕೊಂಡು ಕಡಿಮೆ ವೆಚ್ಚದಲ್ಲಿ ಹೆಚ್ಚಿನ ಉತ್ಪಾದನೆ ಪಡೆಯುವ ವಿಧಾನಗಳತ್ತ ರೈತರು ಗಮನಹರಿಸಬೇಕು ಎಂದರು. ಆನಂದ ಕುಮಾರ ಪಾಟೀಲ ಮಾತನಾಡಿ, ಗ್ರಾಮೀಣ ಪ್ರದೇಶದ ಅಭಿವೃದ್ಧಿಯು ಕೃಷಿ ಕ್ಷೇತ್ರದ ಪ್ರಗತಿಯೊಂದಿಗೆ ನೇರ ಸಂಬಂಧ ಹೊಂದಿದ್ದು, ಕೃಷಿಯನ್ನು ಉಳಿಸಿ ಬೆಳೆಸುವುದರಿಂದ ದೇಶದ ಆರ್ಥಿಕ ಮತ್ತು ಸಾಮಾಜಿಕ ಪ್ರಗತಿಗೆ ಬಲ ದೊರೆಯುತ್ತದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಎಚ್.ಸಿ.ಎಂ.ಎಸ್.ಕೆ. ಪದವಿ ಮಹಾವಿದ್ಯಾಲಯದ ಅಧ್ಯಕ್ಷ ಕೆ. ಶರಣರೆಡ್ಡಿ ಮಾತನಾಡಿ, ಕೃಷಿ ನಮ್ಮ ಜೀವನದ ಅವಿಭಾಜ್ಯ ಅಂಗವಾಗಿದೆ. ರೈತರ ಪರಿಶ್ರಮದಿಂದಲೇ ಸಮಾಜಕ್ಕೆ ಆಹಾರ ದೊರೆಯುತ್ತಿದೆ. ವಿದ್ಯಾರ್ಥಿಗಳು ಕೃಷಿಯ ಮಹತ್ವ ಅರಿತು ರೈತರ ಬಗ್ಗೆ ಗೌರವ ಬೆಳೆಸಿಕೊಳ್ಳಬೇಕು. ಎನ್‌ಎಸ್‌ಎಸ್ ಶಿಬಿರಗಳು ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಜವಾಬ್ದಾರಿ ಮತ್ತು ಸೇವಾ ಮನೋಭಾವ ಬೆಳೆಸಲು ಸಹಕಾರಿಯಾಗುತ್ತವೆ ಎಂದರು.

ಕಾರ್ಯಕ್ರಮಗಳಲ್ಲಿ ಡಾ. ಸಿದ್ದರಾಮಯ್ಯ ಹಿರೇಮಠ, ವೀರನಗೌಡ, ಉತ್ತಪ್ಪ ಕೆ., ಪ್ರವೀಣ ಕುಮಾರ, ಶರಣಮ್ಮ, ಹಂಪಮ್ಮ, ಮಾಧುರಿ, ಈರಪ್ಪ ಸರ್ಜಾಪುರ, ಉಪನ್ಯಾಸಕರು, ಎನ್‌ಎಸ್‌ಎಸ್ ಅಧಿಕಾರಿಗಳು, ಪ್ರಶಿಕ್ಷಣಾರ್ಥಿಗಳು ಹಾಗೂ ಗಬ್ಬೂರು ಗ್ರಾಮಸ್ಥರು ಉಪಸ್ಥಿತರಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K